ಕನ್ನಡ ದಿನಪತ್ರಿಕೆ
15 ಎಪ್ರಿಲ್ । ಸೋಮವಾರ
15 APRIL 2024

ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 ಸಂಪುಟ – 5 ಸಂಚಿಕೆ – 49 ಪುಟ – 4 RNI . KARKAN/2020/79084 ADVRT EMAIL. BELAGAVIVARADIEDITOR@GMAIL.COM NEWSBELAGAVI@GMAIL.COM 9900332089 REG.NO G-2/PMG/KA/NK/BM/139/2024-26

ಹೆಬ್ಬಾಳ್ಕರ್ ವಿರುದ್ಧ ವಿವಾದಾತ್ಮಕ ಹೇಳಿಕೆ: ಸಂಜಯ್ ಪಾಟೀಲ್ ವಿರುದ್ಧ ದೂರು ದಾಖಲು

ಬೆಳಗಾವಿ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ವಿವಾದಾತ್ಮಕ ಹೇಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ಮಾಜಿ ಶಾಸಕ ಸಂಜಯ್ ಪಾಟೀಲ್ ವಿರುದ್ಧ ರಾಜ್ಯ ಮಹಿಳಾ ಆಯೋಗ ಸ್ವಯಂಪ್ರೇರಿತ ಕೇಸ್ ದಾಖಲಿಸಿಕೊಂಡಿದೆ.

ಈ ಕುರಿತಾಗಿ ಸಂಜಯ್ ಪಾಟೀಲ್‌ಗೆ ಮಹಿಳಾ ಆಯೋಗ ನೋಟಿಸ್ ನೀಡಲಿದೆ. ಈ ವಿಚಾರವಾಗಿ ನಿನ್ನೆ ಕಾಂಗ್ರೆಸ್ ಕಾರ್ಯಕರ್ತೆಯರು ಬೆಳಗಾವಿಯ ಆದರ್ಶ ನಗರದಲ್ಲಿರುವ ಸಂಜಯ್ ಪಾಟೀಲ್ ಮನೆ ಎದುರು ಪ್ರತಿಭಟನೆ ಮಾಡಿದ್ದರು.

ಈ ವಿಚಾರವಾಗಿ ಮಾಧ್ಯಮದವರೊಂದಿಗೆ ಮಾತನಾಡಿರುವ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ರಾಜ್ಯದ ಮಹಿಳೆಯರನ್ನ ನಾನು ಪ್ರತಿನಿಧಿಸುತ್ತೇನೆ. ನಾಲಿಗೆ ಮೇಲೆ ಹಿಡಿತ ಇರಬೇಕು. ವೇದಿಕೆ ಮೇಲೆ ಇದ್ದವರು ಯಾಕೆ ತಡೆಯಲ್ಲ. ಸಂಜಯ್ ಪಾಟೀಲ್ ಮೂಲಕ ಮಾತನಾಡಿಸಿದ್ದಾರಾ? ನನಗೆ ಅಲ್ಲ ಇಡೀ ಸ್ತ್ರೀ ಕುಲಕ್ಕೆ ಮಾಡಿದ ಅವಮಾನ ಎಂದು ವಾಗ್ದಾಳಿ ಮಾಡಿದ್ದಾರೆ.

ಸಂಜಯ್ ಪಾಟೀಲ್ ಹೇಳಿದ್ದೇನು?: ಬೆಳಗಾವಿ ತಾಲೂಕಿನ ಹಿಂಡಲಗಾ ಗ್ರಾಮದಲ್ಲಿ ನಡೆದ ಬಿಜೆಪಿ ಕಾರ್ಯಕರ್ತರ ಸಮಾವೇಶದಲ್ಲಿ ಮಾತನಾಡಿದ್ದ ಸಂ–ಜಯ್ ಪಾಟೀಲ್, 'ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕ್ಷೇತ್ರದಲ್ಲಿ ಅತೀ ಹೆಚ್ಚು ಮಹಿಳೆಯರು ಸಮಾವೇಶದಲ್ಲಿ ಭಾಗಿಯಾಗಿದ್ದೀರಿ, ಇದರಿಂದ ಅವರಿಗೆ ಇಂದು ರಾತ್ರಿ ನಿದ್ದೆ ಬರುವುದಿಲ್ಲ. ಅದರಲ್ಲೂ ಇಂದು ರಮೇಶ್ ಜಾರಕಿಹೊಳಿ ಕೂಡ ಪ್ರಚಾರಕ್ಕೆ ಬಂದಿದ್ದರಿಂದ ಮಾತ್ರೆ ಜೊತೆಗೆ ಒಂದು ಪೆಗ್ ಎಕ್ಸ್ಟ್ರಾ ಹಾಕಿಕೊಳ್ಳಬೇಕು ಎಂದು ವಿವಾದಾತ್ಮಕ ಹೇಳಿಕೆ ನೀಡಿದ್ದರು.

ನಾನು ಪ್ರತಿಕ್ರಿಯೆ ನೀಡಿಲ್ಲ ಎಂದ ಯತ್ನಾಳ್: ಸಂ–ಜಯ್ ಪಾಟೀಲ್ ಹೇಳಿಕೆ ವಿಚಾರವಾಗಿ ಬೆಳಗಾವಿಯ ಯಮಕನಮರಡಿಯಲ್ಲಿ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಪ್ರತಿಕ್ರಿಯಿಸಿದ್ದು, ಯಾರು ಬೇಕಾದರೂ ಹೇಳಲಿ ವೈಯಕ್ತಿಕವಾಗಿ ಅವರಿಗೆ ಬಿಟ್ಟಿದ್ದು. ಅಂತವರ ಬಗ್ಗೆ ನಾನು ಪ್ರತಿಕ್ರಿಯೆ ನೀಡಿಲ್ಲ ಎಂದು ಹೇಳಿದ್ದಾರೆ.

ಬಿಜೆಪಿ ನಾಯಕರಿಂದ ಸ್ತ್ರೀ ಕುಲಕ್ಕೆ ಅವಮಾನ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಆಕ್ರೋಶ

ಬೆಳಗಾವಿ: ಸಾರ್ವಜನಿಕ ಸಭೆ ಸಮಾರಂಭಗಳಲ್ಲಿ ಮಾತನಾಡುವಾಗ ಬಿಜೆಪಿ ನಾಯಕರ ನಾಲಿಗೆ ಬಿಗಿ ಹಿಡಿತದಲ್ಲಿರಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಎಚ್ಚರಿಸಿದ್ದಾರೆ. ಬಿಜೆಪಿಯ ಮಾಜಿ ಶಾಸಕ ಸಂಜಯ್ ಪಾಟೀಲ್ ನನ್ನ ವಿರುದ್ಧ ನೀಡಿರುವ ಹೇಳಿಕೆ ಇಡೀ ಸ್ತ್ರೀ ಕುಲಕ್ಕೆ ಮಾಡಿದ ಅವಮಾನ ಎಂದರು.

ಸಂವಿಧಾನ ಶಿಲ್ಪಿ ಡಾ.ಬಾಬಾಸಾಹೇಬ ಅಂಬೇಡ್ಕರ್ ಜಯಂತಿ ನಿಮಿತ್ತ ಬೆಳಗಾವಿಯಲ್ಲಿ ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿದ ಬಳಿಕ ಮಾಧ್ಯಮಗಳೊಂದಿಗೆ ಅವರು ಮಾತನಾಡಿದರು.

ಸಂಜಯ್ ಪಾಟೀಲ್ ನನ್ನ ವಿರುದ್ಧ ಮಾತನಾಡುವಾಗ ವೇದಿಕೆಯಲ್ಲಿದ್ದ ಹಿರಿಯ ನಾಯಕರು ಅದನ್ನು ತಡೆಯಬಹುದಿತ್ತು. ರಾಜ್ಯದ ಮಹಿಳೆಯರನ್ನು ನಾನು ಪ್ರತಿನಿಧಿಸುತ್ತೇನೆ.

ನನ್ನ ವಿರುದ್ಧ ಹೇಳಿಕೆಯನ್ನು ಬಿಜೆಪಿಯವರು ಸಂಜಯ್ ಪಾಟೀಲ್ ಮೂಲಕ ಮಾತನಾಡಿಸಿದ್ದಾರೆ ಎನಿಸುತ್ತಿದೆ

ಎಂದರು. ಇದು ನನಗೆ ಮಾಡಿದ ಅಪಮಾನ ಅಲ್ಲ, ಇಡೀ ಸ್ತ್ರೀ ಕುಲಕ್ಕೆ ಮಾಡಿದ ಅವಮಾನ ಎಂದು ಸಚಿವರು ಕಿಡಿ ಕಾರಿದರು.

ಇದು ಇಡೀ ಸಮಾಜಕ್ಕೆ ಮಾಡಿದ ಅವಮರ್ಯಾದೆ. ಇದರಿಂದ ಮಹಿಳೆಯರ ಆತ್ಮಗೌರವಕ್ಕೆ ಧಕ್ಕೆಯಾಗಿದೆ. ಅವರ ವಿರುದ್ಧ ಇಡೀ ರಾಜ್ಯದ ಮಹಿಳೆಯರು ಧಿಕ್ಕರಿಸಲು ಕರೆ ಕೊಡುವೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು. ಇಡೀ ಸಮಾಜ ನನ್ನ ಜೊತೆಗೆ ಇದೆ. ಇಡೀ ಕಾಂಗ್ರೆಸ್ ಪಕ್ಷದ ನಾಯಕರು ನನ್ನ ಜೊತೆಗೆ ಇದ್ದಾರೆ ಎಂದು ಹೇಳಿದರು.

ಬಿಜೆಪಿಗರು ಮಹಿಳಾ ಸಬಲೀಕರಣದ ವಿರೋಧಿಗಳು:

ಬಿಜೆಪಿಗರು ಮಹಿಳಾ ಅಭಿವೃದ್ಧಿ, ಸಬಲೀಕರಣದ ವಿರೋಧಿಗಳು. ಇದಕ್ಕಾಗಿಯೇ ಹೋದಲೆಲ್ಲಾ ನಮ್ಮ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಬಗ್ಗೆ ಅಪಪ್ರಚಾರ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತುಂಬಾ ಹಿರಿಯರು, ಗ್ಯಾರಂಟಿ ಯೋಜನೆಗಳ ಬಗ್ಗೆ ಮಾತನಾಡುವುದನ್ನು ನಿಲ್ಲಿಸಲಿ. ಎಸಿ ರೂಂನಲ್ಲಿ ಕುಳಿತಿರುವ ನಿಮಗೆ ಕಷ್ಟ ಸುಖದ ಬಗ್ಗೆ ಅರಿವಿಲ್ಲ. ಗ್ಯಾರಂಟಿ ಯೋಜನೆಗಳ ಬಗ್ಗೆ ಅಪಪ್ರಚಾರ ಮಾಡುವ ಮೂಲಕ ಸ್ತ್ರೀ ವಿರೋಧಿಗಳು ಎಂದು ಬಿಜೆಪಿಯವರು ನಿರೂಪಿಸಿದ್ದಾರೆ ಎಂದು ಕಿಡಿಕಾರಿದರು.

ಗ್ಯಾರಂಟಿ ಯೋಜನೆಗಳಿಂದ ಹಳ್ಳಿ ಹೆಣ್ಣುಮಕ್ಕಳು ದಾರಿ ತಪ್ಪುತ್ತಿದ್ದಾರೆ ಎಂಬ ಕುಮಾರಸ್ವಾಮಿ ಹೇಳಿಕೆಗೆ ಪ್ರತಿಕ್ರಿಯಿಸಿದ ಸಚಿವರು, ಕುಮಾರಸ್ವಾಮಿ ಹಿರಿಯರು. ಯಾವ ಹಳ್ಳಿಯ ಮಹಿಳೆ ದಾರಿ ತಪ್ಪಿದ್ದಾರೆ ಎಂದು ಸ್ಪಷ್ಟವಾಗಿ ಹೇಳಲಿ. ಹಳ್ಳಿಯ ಹೆಣ್ಣು ಮಕ್ಕಳ ಬಗ್ಗೆ ಹಗುರವಾಗಿ ಮಾತನಾಡುವುದನ್ನು ನಿಲ್ಲಿಸಿ ಎಂದರು. ಕಾಂಗ್ರೆಸ್ ಯಾವುದೇ ಸ್ವಾರ್ಥಕ್ಕಾಗಿ ಯೋಜನೆಗಳನ್ನು ಮಾಡಿಲ್ಲ.

ಬಿಜೆಪಿಯ ಮನಸ್ಥಿತಿ ಬಗ್ಗೆ ಜನರಿಗೆ ಗೊತ್ತಾಗಿದೆ. ಬರೀ ಸುಳ್ಳು ಹೇಳುವುದು ಬಿಜೆಪಿಯ ಅಜೆಂಡಾ ಆಗಿದೆ ಎಂದು ಸಚಿವರು ಟೀಕಿಸಿದರು.

ಸಚಿವರ ವಿರುದ್ಧದ ಹೇಳಿಕೆಗೆ ಖಂಡನೆ:

ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧದ ಹೇಳಿಕೆಗೆ ಬೆಳಗಾವಿ ಉತ್ತರ ಕ್ಷೇತ್ರದ ಶಾಸಕ ರಾಜು ಸೇಠ್ ಕಿಡಿಕಾರಿದ್ದಾರೆ. ಇಂಥ ಹೇಳಿಕೆಗಳನ್ನು ಯಾಕೆ ಬಿಜೆಪಿಯವರು ಖಂಡಿಸುವುದಿಲ್ಲ.

ರಾಷ್ಟ್ರೀಯ ಮಹಿಳಾ ಆಯೋಗ ಏನು ಮಾಡುತ್ತಿದೆ ಎಂದು ಪ್ರಶ್ನಿಸಿದರು. ಬೆಳಗಾವಿ ಜಿಲ್ಲೆಯ ಎರಡೂ ಕ್ಷೇತ್ರಗಳನ್ನು ಗೆಲ್ಲುವ ಮೂಲಕ ಬಿಜೆಪಿಯವರಿಗೆ ತಕ್ಕ ಉತ್ತರ ನೀಡುತ್ತೇವೆ ಎಂದು ಶಾಸಕರು ಹೇಳಿದರು.

ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ:

ಭಾರತ ರತ್ನ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಜಯಂತಿಯ ಅಂಗವಾಗಿ ಬೆಳಗಾವಿಯ ಅಂಬೇಡ್ಕರ್ ಗಾರ್ಡನ್ ನಲ್ಲಿರುವ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಪ್ರತಿಮೆಗೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮಾಲಾರ್ಪಣೆ ಮಾಡಿದರು.

ಈ ವೇಳೆ ಬೆಳಗಾವಿ ಉತ್ತರ ಕ್ಷೇತ್ರದ ಶಾಸಕ ರಾಜು ಸೇಠ್, ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ ಹಟ್ಟಿಹೊಳಿ, ಕಾಂಗ್ರೆಸ್ ಲೋಕಸಭಾ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್, ಮಲ್ಲೇಶ್ ಚೌಗಲೆ, ಸಿದ್ದಪ್ಪ ಕಾಂಬ್ಲೆ, ಕಲ್ಲಪ್ಪ ರಾಮ್ ಚನ್ನವರ್, ಮಹೇಶ್ ಕೋಲ್ಕರ್, ಸಮತಾ ಸೈನಿಕ ದಳದ ಕಾರ್ಯಕರ್ತರು ಉಪಸ್ಥಿತರಿದ್ದರು.

'ಹೆಚ್ಚುವರಿ ಪೆಗ್' ಎಂದರೆ ಎನರ್ಜಿ ಡ್ರಿಂಕ್': ಸಂಜಯ ಪಾಟೀಲ

ಬೆಳಗಾವಿ: 'ನಾನು ಮಾಡಿದ ಭಾಷಣದಲ್ಲಿ ಅವರ (ಲಕ್ಷ್ಮಿ ಹೆಬ್ಬಾಳಕರ) ಹೆಸರಿದ್ದರೆ ತೋರಿಸಿ. ಅಕ್ಕಾಬಾಯಿ ಎಂದರೆ, ಅವರೇ ಎಂದು ಏಕೆ ತಿಳಿಯುತ್ತೀರಿ? 'ಹೆಚ್ಚುವರಿ ಪೆಗ್' ಎಂದರೆ ಎನರ್ಜಿ ಡ್ರಿಂಕ್' ಎಂದು ಬಿಜೆಪಿ ಮುಖಂಡ ಸಂಜಯ ಪಾಟೀಲ ಸಮರ್ಥಿಸಿಕೊಂಡರು.

ಇಲ್ಲಿ ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ನನ್ನ ತಾಯಿ, ಪತ್ನಿ ಮತ್ತು ಮಗಳೂ ಮಹಿಳೆಯೇ. ಮಹಿಳೆಯರಿಗೆ ಹೇಗೆ ಗೌರವ ಕೊಡಬೇಕು ಎಂಬುದನ್ನು ಭಾರತೀಯ ಸಂಸ್ಕೃತಿ ಕಲಿಸಿದೆ' ಎಂದರು.

'ನಾನು ಲಕ್ಷ್ಮಿ ಅವರ ಹೆಸರು ತೆಗೆದುಕೊಂಡಿದ್ದರೆ ಇಲ್ಲಿಯೇ ಶಿಕ್ಷೆ ಕೊಡಿ. ಯಾರಿಗೂ ನಾನು ಅಪಮಾನಿಸಿಲ್ಲ. ತಪ್ಪು ಮಾಡಿದ್ದರೆ ಚುನಾವಣೆ ಆಯೋಗ, ಪೊಲೀಸರಿಗೆ ದೂರು ಕೊಡಿ. ಸಿಬಿಐ ತನಿಖೆ ಆಗಲಿ. ತಪ್ಪು ಸಾಬೀತಾದರೆ ಅವರು ಶಿಕ್ಷೆ ನೀಡುತ್ತಾರೆ. ಆದರೆ, ರಾತ್ರಿ ನಮ್ಮ ಮನೆ ಎದುರು ಕಾಂಗ್ರೆಸ್‌ನವರು ಪ್ರತಿಭಟನೆ ಮಾಡಿದ್ದು ಎಷ್ಟು ಸರಿ? ನನ್ನ ಮನೆ ಎದುರು ಪ್ರತಿಭಟಿಸಿದ್ದಕ್ಕೆ ಕ್ರಿಮಿನಲ್ ಪ್ರಕರಣ ದಾಖಲಿಸುವೆ' ಎಂದರು.

'ನಾನು ಹೃದ್ರೋಗಿಯಾಗಿದ್ದು, ಬೈಪಾಸ್ ಸರ್ಜರಿ ಆಗಿದೆ. ಆರೋಗ್ಯಕ್ಕೆ ಸಮಸ್ಯೆಯಾದರೆ ನನ್ನ ಗತಿ ಏನು? ಲಕ್ಷ್ಮಿ ಹೆಬ್ಬಾಳಕರ ಅವರಿಗೆ ಈ ಚುನಾವಣೆಯಲ್ಲಿ ಸೋಲಿನ ಭಯ ಶುರುವಾಗಿದೆ. ಅವರು ತಮ್ಮ ಸ್ವಾರ್ಥಕ್ಕೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ' ಎಂದರು.

ಗೋವಾದಲ್ಲಿ ಕನ್ನಡಿಗರ ಮನೆ ನೆಲಸಮ; ಸಿಎಂ ವಿಷಾದ

ಬೆಂಗಳೂರು: ಗೋವಾದ ಸಾಂಗೋಲ್ಡಾದಲ್ಲಿ ಕನ್ನಡಿಗರ ಮನೆಗಳನ್ನು ನೆಲಸಮಗೊಳಿಸಿರುವ ಘಟನೆಗೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ವಿಷಾದ ವ್ಯಕ್ತಪಡಿಸಿದ್ದಾರೆ.

ಈ ಕುರಿತು ತಮ್ಮ ಎಕ್ಸ್ ಖಾತೆಯಲ್ಲಿ ಭಾನುವಾರ ಸಂದೇಶ ಹಂಚಿಕೊಂಡಿರುವ ಸಿಎಂ ಸಿದ್ದರಾಮಯ್ಯ, ಪರ್ಯಾಯ ವ್ಯವಸ್ಥೆಗಳನ್ನು ಕಲ್ಪಿಸಿಕೊಳ್ಳುವವರೆಗೆ ಒತ್ತುವರಿ ತೆರವು ಕಾರ್ಯವನ್ನು ನಿಲ್ಲಿಸುವಂತೆ ಗೋವಾದ ಸಿಎಂ ಪ್ರಮೋದ್ ಸಾವಂತ್ ಅವರಲ್ಲಿ ಮನವಿ ಮಾಡಿಕೊಂಡಿದ್ದಾರೆ.

ತೆರವು ಕಾರ್ಯದಲ್ಲಿ ಮನೆಗಳನ್ನು ಕಳೆದುಕೊಂಡ ಎಲ್ಲಾ ಜನರ ಘನತೆ ಗೌರವಗಳನ್ನು ಎತ್ತಿಹಿಡಿಯಿವುದಾಗಿ ಸಿಎಂ ಸಿದ್ದರಾಮಯ್ಯ ಹೇಳಿದ್ದು, ನೊಂದ ಕುಟುಂಬಗಳೊಡನೆ ನಿಲ್ಲುವುದಾಗಿ ಹೇಳಿದ್ದಾರೆ.

ಸರ್ಕಾರಿ ಜಾಗದಲ್ಲಿ ಮನೆಗಳನ್ನು ಕಟ್ಟಿಕೊಂಡು ವಾಸಿಸುತ್ತಿದ್ದ ಆರೋಪದ ಮೇಲೆ ಅಕ್ರಮ ಒತ್ತುವರಿ ಕಾರ್ಯವನ್ನು ಸರ್ಕಾರ ಕೈಗೊಂಡಿತ್ತು. ಜನರ ಪ್ರತಿಭಟನೆಯ ನಡುವೆಯೂ ಪೊಲೀಸ್ ಸುರಕ್ಷತೆಯೊಂದಿಗೆ ಹಲವು ಮನೆಗಳನ್ನು ನೆಲಸಮ ಮಾಡಲಾಗಿದೆ.

ಮಹಿಳೆಯರ ಬಗ್ಗೆ ಕುಮಾರಸ್ವಾಮಿ ವಿವಾದಾತ್ಮಕ ಹೇಳಿಕೆ: ಕೇಸ್ ದಾಖಲು

ಬೆಂಗಳೂರು: ಗ್ಯಾರಂಟಿಗಳಿಂದ ಹಳ್ಳಿ ಹೆಣ್ಮಕ್ಕಳು ದಾರಿ ತಪ್ಪಿದ್ದಾರೆ ಎಂಬ ಹೆಚ್.ಡಿ.ಕುಮಾರಸ್ವಾಮಿ ವಿವಾದಾತ್ಮಕ ಹೇಳಿಕೆಗೆ ಸಂಬಂಧಿಸಿದಂತೆ ರಾಜ್ಯ ಮಹಿಳಾ ಆಯೋಗ ಸ್ವಯಂಪ್ರೇರಿತ ಕೇಸ್ ದಾಖಲಿಸಿಕೊಂಡಿದೆ.

ಮಹಿಳೆಯರ ಘನತೆಗೆ, ಚಾರಿತ್ರ್ಯಕ್ಕೆ ಕುಮಾರಸ್ವಾಮಿ ಅವರು ಧಕ್ಕೆ ತಂದಿದ್ದಾರೆ. ಈ ಹಿನ್ನಲೆಯಲ್ಲಿ ಕುಮಾರಸ್ವಾಮಿ ಹೇಳಿಕೆಯನ್ನು ಮಹಿಳಾ ಆಯೋಗ ಗಂಭೀರವಾಗಿ ಪರಿಗಣಿಸಿ ಸುಮೋಟೋ ಪ್ರಕರಣ ದಾಖಲಿಸಿಕೊಂಡಿದ್ದು, ಈ ಬಗ್ಗೆ ನೋಟಿಸ್ ಜಾರಿ ಮಾಡಲಿದೆ.

ಘಟನೆ ವಿವರ: ಏ.13 ತುಮಕೂರು ಜಿಲ್ಲೆಯ ತುರುವೇಕೆರೆಯಲ್ಲಿ ವಿ.ಸೋಮಣ್ಣ ಪರ ಪ್ರಚಾರ ಭಾಷಣದಲ್ಲಿ ಹೆಚ್ಡಿ ಕುಮಾರಸ್ವಾಮಿ ಮಾತನಾಡಿ, 'ಗ್ಯಾರಂಟಿಗಾಗಿ ಯಾವ ಜೇಬಿಗೆ ಕೈ ಹಾಕಿದ್ದಾರೆ ಎಂದು ಹೇಳುತ್ತಾ, ಇವತ್ತಿನ ಸರ್ಕಾರ ಕಳೆದ ಚುನಾವಣೆಯಲ್ಲಿ ಐದು ಗ್ಯಾರಂಟಿ ಘೋಷಣೆ ಮಾಡಿ ನನ್ನ ಹಳ್ಳಿಯ ತಾಯಂದಿರು ಸ್ವಲ್ಪ ದಾರಿ ತಪ್ಪಿದ್ದಾರೆ ಎಂದು ವಿವಾದಾತ್ಮಕ ಹೇಳಿಕೆ ನೀಡಿದ್ದರು. ಇದರ ಬೆನ್ನಲ್ಲೇ ರಾಜ್ಯದ ಹಲವೆಡೆ ವಿರೋಧ ವ್ಯಕ್ತವಾಗಿದೆ.

ಅಣ್ವಸ್ತ್ರಗಳ ವಿರುದ್ಧ ಇರುವವರು ದೇಶವನ್ನು ರಕ್ಷಿಸಲು ಸಾಧ್ಯವಿಲ್ಲ: ವಿಪಕ್ಷಗಳ ವಿರುದ್ಧ ಪ್ರಧಾನಿ ಮೋದಿ ಟೀಕೆ



ನವದೆಹಲಿ: ಲೋಕಸಭಾ ಚುನಾವಣೆ ಪ್ರಚಾರದಲ್ಲಿ ತೊಡಗಿರುವ ಪ್ರಧಾನಿ ನರೇಂದ್ರ ಮೋದಿ ಇಂಡಿಯಾ ಮೈತ್ರಿಕೂಟದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಪರಮಾಣು ನಿಶ್ಶಸ್ತ್ರೀಕರಣದ ಪರವಾಗಿರುವ ಇಂಡಿಯಾ ಮೈತ್ರಿಕೂಟ ದೇಶವನ್ನು ರಕ್ಷಿಸುವುದಕ್ಕೆ ಸಾಧ್ಯವಿಲ್ಲ ಎಂದು ಮೋದಿ ಹೇಳಿದ್ದಾರೆ.

ಇದೇ ವೇಳೆ ರಾಹುಲ್ ಗಾಂಧಿ ನೀಡಿದ್ದ ಬಡತನ ನಿರ್ಮೂಲನೆ ಹೇಳಿಕೆ ಬಗ್ಗೆಯೂ ವ್ಯಂಗ್ಯವಾಡಿರುವ ಮೋದಿ, ದೇಶ ರಾಹುಲ್ ಗಾಂಧಿಯನ್ನು ಗಂಭೀರವಾಗಿ ತೆಗೆದುಕೊಳ್ಳುವುದಿಲ್ಲ ಎಂದು ಹೇಳಿದ್ದಾರೆ.

ಕಾಂಗ್ರೆಸ್ ಪಕ್ಷ ಅಂಬೇಡ್ಕರ್ ಅವರನ್ನು ಅವಮಾನಿಸಿದೆ, ಆದರೆ ಬಿಜೆಪಿ ಸರ್ಕಾರ ಅಂಬೇಡ್ಕರ್ ಅವರಿಗೆ ಗೌರವ ಸಲ್ಲಿಸಿದೆ ಎಂದು ಹೇಳಿದ್ದಾರೆ.

ಯಾವುದೇ ಪಕ್ಷವನ್ನು ಹೆಸರಿಸದೆ, ಸಿಪಿಐ(ಎಂ) ಪ್ರಣಾಳಿಕೆಯನ್ನು ಉಲ್ಲೇಖಿಸಿ ಇಂಡಿಯಾ ಬ್ಲಾಕ್‌ನ ಒಂದು ಘಟಕವು ಪರಮಾಣು ನಿಶ್ಶಸ್ತ್ರೀಕರಣಕ್ಕೆ ಕರೆ ನೀಡಿದೆ ಎಂದು ಮೋದಿ ಆರೋಪಿಸಿದ್ದಾರೆ.

ಇಂದಿನ ಜಗತ್ತಿನಲ್ಲಿ, ವಿಶೇಷವಾಗಿ ದೇಶದ ಶತ್ರುಗಳು ತಮ್ಮೊಂದಿಗೆ ತುಂಬಾ ಶಕ್ತಿ ಹೊಂದಿರುವಾಗ ದೇಶಕ್ಕೆ ಪರಮಾಣು ಅಸ್ತ್ರದ ಅಗತ್ಯವಿದೆಯೇ ಅಥವಾ ಇಲ್ಲವೇ ಎಂದು ಮೋದಿ ಜನರನ್ನು ಕೇಳಿದರು.

"ಭಾರತ ಮೈತ್ರಿಕೂಟದ ಪಾಲುದಾರರ ಪ್ರಣಾಳಿಕೆಗಳಲ್ಲಿ, ಹಲವಾರು ಅಪಾಯಕಾರಿ ಭರವಸೆಗಳನ್ನು ನೀಡಲಾಯಿತು.

ಅದರ ಪಾಲುದಾರರ ಪ್ರಣಾಳಿಕೆಯೊಂದರಲ್ಲಿ ಅದು ದೇಶವನ್ನು ಅಣ್ವಸ್ತ್ರೀಕರಣಗೊಳಿಸುವುದಾಗಿ ಹೇಳಿದೆ"ಎಂದು ಅವರು ಹೇಳಿದರು. "ನಮ್ಮ ದೇಶವನ್ನು ರಕ್ಷಿಸಲು ನಾವು ಪರಮಾಣು ಶಸ್ತ್ರಾಸ್ತ್ರಗಳನ್ನು ಹೊಂದಿರಬೇಕು; ಇಲ್ಲದಿದ್ದರೆ ಅವರು ಭಾರತವನ್ನು ಹೇಗೆ ರಕ್ಷಿಸುತ್ತಾರೆ" ಎಂದು ಮೋದಿ ಪ್ರಶ್ನಿಸಿದ್ದಾರೆ.

ಕೆನಡಾ: ಭಾರತ ಮೂಲದ 24 ವರ್ಷದ ವಿದ್ಯಾರ್ಥಿಗೆ ಗುಂಡಿಕ್ಕಿ ಹತ್ಯೆ, ಕಾರಿನೊಳಗೆ ಶವವಾಗಿ ಪತ್ತೆ

ನವದೆಹಲಿ: ಕೆನಡಾದ ದಕ್ಷಿಣ ವ್ಯಾಂಕೋವರ್‌ನಲ್ಲಿ ಭಾರತ ಮೂಲಕ 24 ವರ್ಷದ ವಿದ್ಯಾರ್ಥಿಯೊಬ್ಬನಿಗೆ ಗುಂಡಿಕ್ಕಿ ಹತ್ಯೆ ಮಾಡಲಾಗಿದ್ದು, ಕಾರಿನೊಳಗೆ ಶವ ಪತ್ತೆಯಾಗಿದೆ ಎಂದು ಸ್ಥಳೀಯ ಪೊಲೀಸರು ತಿಳಿಸಿದ್ದಾರೆ.

24 ವರ್ಷದ ಚಿರಾಗ್ ಆಂಟಿಲ್ ಎಂಬಾತ ಕಾರಿನೊಳಗೆ ಶವವಾಗಿ ಪತ್ತೆಯಾಗಿದ್ದು, ಸ್ಥಳೀಯರು ಗುಂಡೇಟಿನ ಶಬ್ದ ಕೇಳಿದ್ದಾಗಿ ವರದಿಯಾಗಿದೆ ಎಂದು ವ್ಯಾಂಕೋವರ್ ಪೊಲೀಸರು ಬಿಡುಗಡೆ ಮಾಡಿದ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ನಗರದಲ್ಲಿ ನಡೆದಿರುವ ಈ ಹತ್ಯೆಯ ಕುರಿತು ತನಿಖೆ ನಡೆಸುತ್ತಿರುವುದಾಗಿ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

'ಏಪ್ರಿಲ್ 12 ರಂದು ರಾತ್ರಿ 11 ಗಂಟೆಯ ಸುಮಾರಿಗೆ ಪೂರ್ವ 55ನೇ ಅವೆನ್ಯೂ ಮತ್ತು ಮುಖ್ಯ ರಸ್ತೆಯಲ್ಲಿ ಸ್ಥಳೀಯ ನಿವಾಸಿಗಳು ಗುಂಡಿನ ಶಬ್ದವನ್ನು ಕೇಳಿದ್ದಾರೆ. ನಂತರ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿದ್ದಾರೆ.

ಈ ವೇಳೆ 24 ವರ್ಷದ ಚಿರಾಗ್ ಆಂಟಿಲ್ ಎಂಬಾತ ಕಾರಿನೊಳಗೆ ಮೃತಪಟ್ಟಿರುವುದು ಕಂಡುಬಂದಿದೆ.

ಈ ಸಂಬಂಧ ಯಾರನ್ನೂ ಬಂಧಿಸಿಲ್ಲ ಮತ್ತು ಮುಂದಿನ ತನಿಖೆ ನಡೆಯುತ್ತಿದೆ ಎಂದರು.

ಶನಿವಾರ ಸಂಜೆ, ವ್ಯಾಂ

ಡಾ. ಬಾಬಾಸಾಹೇಬ ಅಂಬೇಡ್ಕರ 133ನೇ ಜನ್ಮ ದಿನಾಚರಣೆ

ಸರ್ವರಿಗೂ ಸಮಾನ ಹಕ್ಕು ಕಲ್ಪಿಸಿದ ಕೀರ್ತಿ ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರಿಗೆ ಸಲ್ಲುತ್ತದೆ: ಡಾ.ಪ್ರವೀಣಾ

ಬೆಳಗಾವಿ: ಡಾ. ಬಾಬಾಸಾಹೇಬ್ ಅಂಬೇಡ್ಕರ ಅವರು ಭಾರತದ ಕಾನೂನು ಸುವ್ಯವಸ್ಥೆ, ಅಸ್ಪೃಶ್ಯತೆ ನಿವಾರಣೆ, ಪ್ರಜೆಗಳ ಮೂಲಭೂತ ಕರ್ತವ್ಯ, ಸಮಾನತೆ, ಶಿಕ್ಷಣ ಕ್ಷೇತ್ರ ಸೇರಿದಂತೆ ಹಲವು ಕ್ಷೇತ್ರಗಳಿಗೆ ತಮ್ಮದೇಯಾದ ಕೊಡುಗೆಯನ್ನು ನೀಡುವುದರ ಮೂಲಕ ದೇಶ ಕಂಡ ಮಹಾನ್ ನಾಯಕರಾಗಿ ವಿಶ್ವ ಮಾನವ ಸಂದೇಶ ಸಾರಿದ ಮೊದಲ ವ್ಯಕ್ತಿಯಾಗಿದ್ದಾರೆ ಎಂದು ಕಡೋಲಿ ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕಿ ಡಾ. ಪ್ರವೀಣಾ ಕೆ.ಎಸ್ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಡಾ. ಬಾಬಾಸಾಹೇಬ ಅಂಬೇಡ್ಕರ ಉದ್ಯಾನದಲ್ಲಿ ರವಿವಾರ (ಏ.14) ನಡೆದ ಡಾ. ಬಾಬಾಸಾಹೇಬ ಅಂಬೇಡ್ಕರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಭಾರತೀಯ ಸಂವಿಧಾನದ ಪಿತಾಮಹ ಎಂದು ಪ್ರಸಿದ್ಧರಾದ ಡಾ. ಬಿ.ಆರ್ ಅಂಬೇಡ್ಕರ್ ಅವರು ಭಾರತೀಯ ಇತಿಹಾಸದಲ್ಲಿ ಒಂದು ಸ್ಮಾರಕ ವ್ಯಕ್ತಿ. ಅವರು ಭಾರತದ ಸಂವಿಧಾನವನ್ನು ರೂಪಿಸಿ ಕೆಳ ಸಮುದಾಯಗಳ ಪ್ರಗತಿಗೆ ಶ್ರಮಿಸಿದ್ದಾರೆ. ಭಾರತದಲ್ಲಿನ ದೀನದಲಿತ ಜಾತಿಗಳಿಗೆ ಸಮಾನತೆ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ತಮ್ಮ ಜೀವಿತಾವಧಿಯನ್ನು ಕೊಡುಗೆಯಾಗಿ ನೀಡಿದ್ದಾರೆ ಎಂದು ತಿಳಿಸಿದರು.

ಅಸಮಾನತೆಯನ್ನು ಹೋಗಲಾಡಿಸಲು ಸಂವಿಧಾನ ಗ್ರಂಥ ರಚಿಸಿ ತಮ್ಮ ಛಾಪು ಜಗತ್ತಿಗೆ ಪರಿಚಯಿಸಿದ್ದಾರೆ. ದೇಶದಲ್ಲಿ ಕಾನೂನು ಬರೆದು, ಪುಸ್ತಕ ಹಿಡಿದು ಪಾರ್ಲಿಮೆಂಟ್ ಗೆ ಹೆಜ್ಜೆ ಇಟ್ಟ ಕೆಳ ಸಮುದಾಯಗಳ ಮೊದಲ ಸಾಧಕರು ಡಾ.ಬಾಬಾ ಸಾಹೇಬ ಅಂಬೇಡ್ಕರ್. ಶೋಷಿತ ಜನಾಂಗದ ಸಂಕೇತವಾಗಿ ಮಾತ್ರ ಅವರನ್ನು ಬಿಂಬಿಸಲಾಗುತ್ತಿದೆ ಅವರು ಸರ್ವರಿಗೂ ಸಮಾನ ಹಕ್ಕು ನೀಡಿದ್ದಾರೆ.

ಮಹಿಳಾ ಸಬಲೀಕರಣ, ಸಾಮಾಜಿಕ ಸುಧಾರಣೆ ಜೀವನ ಜೀವನ ಮುಡಿಪಾಗಿಟ್ಟಿದ್ದರು. ಕಲ್ಲಿದ್ದಲು ಗಣಿಗಳಲ್ಲಿ ದುಡಿಯುವ ಕಾರ್ಮಿಕರ ಆರೋಗ್ಯ, ಚಿಕಿತ್ಸೆ, ವೇತನ ಎಲ್ಲವನ್ನೂ ಆಳವಾಗಿ ಅಧ್ಯಯನ ಮಾಡಿ, ಕಾರ್ಮಿಕರಿಗೆ ಕನಿಷ್ಠ ವೇತನ, ಜೀವನ ವಿಮೆ ಜಾರಿಗೆ ತಂದರು.

ಕಾನೂನು ಚೌಕಟ್ಟಿನಲ್ಲಿ ಮಹಿಳಾ ಹಕ್ಕುಗಳನ್ನು ಕಾಯ್ದಿರಿಸಿ ಮಹಿಳೆಯರಿಗೆ ಸಮಾನತೆ ಕಲ್ಪಿಸಿದರು. ಮಹಿಳೆಯರಿಗೆ ಶಿಕ್ಷಣ, ಉದ್ಯೋಗ ಮೀಸಲಾತಿ ತಂದರು. ಅದರಂತೆ ಕೃಷಿ, ಕೈಗಾರಿಕೆಯಿಂದ ಜನರು ಆರ್ಥಿಕ ಅಭಿವೃದ್ಧಿ ಹೊಂದಲು ದೇಶದ ಹಿತ ದೃಷ್ಟಿಯಿಂದ ಉತ್ತರ ಭಾರತದಲ್ಲಿ ಅಣೆಕಟ್ಟುಗಳನ್ನು ನಿರ್ಮಾಣ ಮಾಡಿ ಕೊಟ್ಟಿದ್ದಾರೆ ಎಂದು ಹೇಳಿದರು.

" ಒಬ್ಬ ವಿದ್ಯಾವಂತ ಪಡೆದ ಶಿಕ್ಷಣವು ಬಡವರ ಕಲ್ಯಾಣಕ್ಕೆ ಹಾನಿಕಾರಕವಾಗಿದ್ದರೆ, ಆ ವಿದ್ಯಾವಂತ ಮನುಷ್ಯ ಸಮಾಜಕ್ಕೆ ಶಾಪವಿದ್ದಂತೆ" "ನಿಮ್ಮ ಮಕ್ಕಳಿಗೆ ಧಾರ್ಮಿಕತೆಯನ್ನು ಬೋಧಿಸಬೇಡಿ. ಅವರು ಮೂಢನಂಬಿಕೆಯ ಗುಲಾಮರಾಗುತ್ತಾರೆ. ಅವರಿಗೆ ಶಿಕ್ಷಣ ಕೊಡಿ, ಗುಲಾಮಗಿರಿಯನ್ನು ಮೆಟ್ಟಿ ನಿಲ್ಲುತ್ತಾರೆ" ಎಂಬ ಅವರು ಗಟ್ಟಿ ಮಾತುಗಳಿಂದ ತಳ ಸಮುದಾಯ ಶಿಕ್ಷಣ ಕ್ಷೇತ್ರಗಳಲ್ಲಿ ಸಾಕಷ್ಟು ಮುಂದುವರೆಯಲು ಸಹಾಯವಾಯಿತು.ಪುಸ್ತಕ, ಜ್ಞಾನದ ಮಾರ್ಗದಲ್ಲಿ ಯುವ ಪೀಳಿಗೆ ನಡೆಯಬೇಕು ಎಂದು ಉಪನ್ಯಾಸಕಿ ಡಾ. ಪ್ರವೀಣಾ ಕೆ.ಎಸ್ ಅವರು ಉಪನ್ಯಾಸದಲ್ಲಿ ತಿಳಿಸಿದರು.

ಡಾ.ಬಿ.ಆರ್ ಅಂಬೇಡ್ಕರ ಅವರ ಜನ್ಮ ದಿನಾಚರಣೆ ದೇಶಕ್ಕೆ ಹಬ್ಬವಿದ್ದಂತೆ. ಭಾರತ ಇಷ್ಟು ಪ್ರಗತಿಪರ ರಾಷ್ಟ್ರಗಳು ಮೂಲ ಕಾರಣ ಡಾ. ಬಿ.ಆರ್. ಅಂಬೇಡ್ಕರ್ ಅವರು. ಬ್ರಿಟಿಷ್ ರಿಂದ ಸ್ವಾತಂತ್ರ್ಯ ಸಿಕ್ಕ ಬಳಿಕ, ಸಾಮಾಜಿಕ ,ಆರ್ಥಿಕ, ರಾಜಕೀಯವಾಗಿ ನ್ಯಾಯ ಸಿಗಲು ಸಂವಿಧಾನ ಗ್ರಂಥ ರಚನೆಯ ಮೂಲಕ ಮೂಲ ಭೂತ ಹಕ್ಕು ಒದಗಿಸಿದ್ದಾರೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

ಮಹಿಳೆಯರಿಗೆ ಮತದಾನ, ಯಾವುದೇ ವೃತ್ತಿ ಆಯ್ಕೆ, ಚುನಾವಣಾ ಪ್ರಕ್ರಿಯೆ ಸೇರಿದಂತೆ ಎಲ್ಲರಿಗೂ ಸಮಾನ ಅವಕಾಶ ಕಪಿಸುವ ನಿಟ್ಟಿನಲ್ಲಿ ಸಂವಿಧಾನ ರಚನೆ ಮಾಡಿದ್ದಾರೆ. ವಿಶ್ವದ ನೂರಾರು ದೇಶಗಳು ಭಾರತ ದೇಶದ ಸಂವಿಧಾನವನ್ನು ತಮ್ಮ ದೇಶಗಳಲ್ಲಿ ಅಳವಡಿಸಿಕೊಳ್ಳುತ್ತಿದ್ದಾರೆ.

ಪ್ರತಿಯೊಬ್ಬ ವ್ಯಕ್ತಿಗೆ ಮತದಾನ ಹಕ್ಕು, ಪ್ರತಿ ಪ್ರಜೆಯು ತಮ್ಮ ನಾಯಕನನ್ನು ಆಯ್ಕೆ ಮಾಡಲು ಅವಕಾಶ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ಭಾರತ ದೇಶ ಇನ್ನೂ ಪ್ರಗತಿಪರ ರಾಷ್ಟ್ರವಾಗಲಿದೆ ಅದಕ್ಕೆ ಅಡಿಪಾಯ ಅಂಬೇಡ್ಕರ್ ಅವರು ಹಾಕಿ ಕಟ್ಟಿದ್ದಾರೆ. ಅವರ ಆಸ್ತಿ ಜ್ಞಾನ ಹಾಗೂ ಪುಸ್ತಕ ಭಂಡಾರ ಅದರಂತೆ ನಿಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವುದರ ಮೂಲಕ ದೇಶಕ್ಕೆ ಆಸ್ತಿಯನ್ನಾಗಿ ಮಾಡಿರಿ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

ಸಂವಿಧಾನ ಪೀಠಿಕೆ ಬೋಧನೆ:

ವೇದಿಕೆ ಕಾರ್ಯಕ್ರಮ ಪ್ರಾರಂಭಕ್ಕೂ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಸಂವಿಧಾನ ಪೀಠಿಕೆ ಭೋಧಿಸಿದರು.

ವಿದ್ಯಾರ್ಥಿಗಳಿಗೆ ಸನ್ಮಾನ:

ಕಾರ್ಯಕ್ರಮದ ಕೊನೆಯಲ್ಲಿ ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ನಗರ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ ಶಿಂಧೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಭೀಮಾಶಂಕರ ಗುಳೇದ, ರಾಣಿ ಚನ್ನಮ್ಮ ವಿಶ್ವ ವಿದ್ಯಾಲಯದ ರಿಜಿಸ್ಟರ್ ರಾಜಶ್ರೀ ಜೈನಾಪುರ, ಮಹಾನಗರ ಪಾಲಿಕೆ ಆಯುಕ್ತ ಲೋಕೇಶ್, ಸಮಾಜ ಕಲ್ಯಾಣ ಜಂಟಿ ನಿರ್ದೇಶಕ ನವೀನ ಶಿಂತ್ರೆ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಬಸವರಾಜ ಕುರಿಹುಲಿ, ಅಂಗವಿಕಲರ ಕಲ್ಯಾಣಾಧಿಕಾರಿ ನಾಮದೇವ ಬಿಲ್ಕಾರ್, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಶಿವಪ್ರಿಯ ಕಡೆಚೂರು, ಸಮಾಜದ ಮುಖಂಡರಾದ ಮಲ್ಲೇಶ ಚೌಗಲಾ, ಮಹಾದೇವ ತಳವಾರ, ಯಲ್ಲಪ್ಪ ಹುದಲಿ, ಸೇರದಂತೆ ವಿವಿಧ ಇಲಾಖೆಯ ಅಧಿಕಾರಿ ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಜಿಲ್ಲೆಯಿಂದ ಆಗಮಿಸಿದ ಸಾವಿರಾರು ಜನರು ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಜಿಲ್ಲಾ ಪಂಚಾಯತಿ ಸಿಇಓ ರಾಹುಲ್ ಶಿಂಧೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ ಮಹಾನಗರ ಪಾಲಿಕೆ ಆಯುಕ್ತರಾದ ಪಿ.ಎನ್.ಲೋಕೇಶ್, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ನವೀನ್ ಶಿಂತ್ರೆ, ಸಮಾಜದ ಮುಖಂಡರಾದ ಮಲ್ಲೇಶ ಚೌಗಲಾ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಮೆರವಣಿಗೆ ಕಾರ್ಯಕ್ರಮ:

ಇದಕ್ಕೂ ಮೊದಲು ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಜಿಲ್ಲಾ ಪಂಚಾಯತಿ ಸಿಇಓ ರಾಹುಲ್ ಶಿಂಧೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ ಅವರು ಸದಾಶಿವ ನಗರದ ಬುದ್ಧವಿಹಾರದ ಆವರಣದಲ್ಲಿರುವ ಡಾ.ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿದರು. ಬಳಿಕ ಧರ್ಮವೀರ ಸಂಭಾಜಿ ವೃತ್ತದಿಂದ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರದ ಭವ್ಯ ಮೆರವಣಿಗೆ ನಡೆಯಿತು.

ಜಿಪಂ. ನಲ್ಲಿ ಡಾ: ಬಿ.ಆರ್. ಅಂಬೇಡ್ಕರ ಜಯಂತಿ ಆಚರಣೆ

ಬೆಳಗಾವಿ: ಡಾ: ಬಾಬಾ ಸಾಹೇಬ ಅಂಬೇಡ್ಕರ ಅವರು ದೇಶಕ್ಕೆ ನೀಡಿದ ಕೊಡುಗೆ ಅಪಾರವಾಗಿದ್ದು, ಅವರು ಹಾಕಿ ಕೊಟ್ಟ ಭದ್ರ ಬುನಾದಿಯಲ್ಲಿ ಇವತ್ತು ನಾವೆಲ್ಲ ಸಾಗುತ್ತಿದ್ದೇವೆ. ಇವರ ಆದರ್ಶಗಳು ಕೇವಲ ಜಯಂತಿಗೆ ಸೀಮಿತವಾಗದೇ ಪ್ರತಿನಿತ್ಯ ಎಲ್ಲರೂ ಅಳವಡಿಸಿಕೊಳ್ಳಬೇಕೆಂದು ಜಿಪಂ ಸಿಇಒ ರಾಹುಲ್ ಶಿಂಧೆ ಅವರು ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಕಾರ್ಯಾಲಯದಲ್ಲಿ ರವಿವಾರ (ಏ-14) ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ ಅವರ 133ನೇ ಜನ್ಮ ದಿನಾಚರಣೆ ನಿಮಿತ್ತ ಅವರ ಭಾವಚಿತ್ರಕ್ಕೆ ಜಿಪಂ ಸಿಇಒ ರಾಹುಲ್ ಶಿಂಧೆ ಅವರು ಪೂಜೆ ಸಲ್ಲಿಸಿ ಮಾತನಾಡಿದರು.

ಜಿ.ಪಂ. ಉಪ ಕಾರ್ಯದರ್ಶಿ ಬಸವರಾಜ ಅಡವಿಮಠ, ಮುಖ್ಯ ಲೆಕ್ಕಾಧಿಕಾರಿ ಪರಶುರಾಮ ದುಡಗುಂಟಿ, ಮುಖ್ಯ ಯೋಜನಾಧಿಕಾರಿ ಗಂಗಾಧರ ದಿವಟರ, ಲೆಕ್ಕಾಧಿಕಾರಿ ಗಂಗಾ ಹಿರೇಮಠ, ಅಕ್ಷರದಾಸೋಹ ಕ್ಷೇತ್ರ ಶಿಕ್ಷಣಾಧಿಕಾರಿ ಯಕ್ಕುಂಡಿ, ಸಹಾಯಕ ನಿರ್ದೇಶಕಿ ಜಯಶ್ರೀ ನಂದೇನ್ನವರ, ಶಾಖಾ ವ್ಯವಸ್ಥಾಪಕರು ಹಾಗೂ ಇತರರು ಉಪಸ್ಥಿತರಿದ್ದರು.

ಮಹಾನಗರಪಾಲಿಕೆ ಪಾಲಿಕೆ ಆವರಣದಲ್ಲಿ ಇಂದು ಡಾ.ಬಿ.ಆರ್. ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಡಾ.ಬಿ.ಆರ್. ಅಂಬೇಡ್ಕರ್ ರವರ 133 ನೇ ಜಯಂತಿಯ ಆಚರಣೆ ಮಾಡಲಾಯಿತು. ಈ ವೇಳೆ ಜಿಲ್ಲಾಧಿಕಾರಿಗಳಾದ ಗುರುದತ್ತ ಹೆಗಡೆ, ಜಿ.ಪಂ. ಸಿಇಒ ಸ್ನೇಹಲ್ ಸುಧಾಕರ ಲೋಖಂಡೆ, ಎಸ್ಪಿ ಮಿಥುನ್ ಕುಮಾರ್, ಪಾಲಿಕೆ ಆಯುಕ್ತರಾದ ಮಾಯಣ್ಣಗೌಡ, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಡಿ.ಮಲ್ಲೇಶಪ್ಪ, ದಲಿತ ಸಂಘಟನೆಗಳ ಮುಖಂಡರು, ಇತರೆ ಅಧಿಕಾರಿಗಳು, ಸಿಬ್ಬಂದಿಗಳು ಹಾಜರಿದ್ದರು.

ಕೇಂದ್ರ ಸರ್ಕಾರ ನಮಗೆ ಭಿಕ್ಷೆ ಕೊಡಬೇಕಿಲ್ಲ, ಸಂವಿಧಾನಾತ್ಮಕವಾಗಿ ನೀಡಬೇಕಾದ ಪಾಲು ನೀಡಲಿ: ಸಂಯುಕ್ತ ಪಾಟೀಲ್

ಜಮಖಂಡಿ: ಎರಡು ವರ್ಷದಿಂದ ಬರಗಾಲ ಎದುರಿಸಿದ ಕರ್ನಾಟಕಕ್ಕೆ ಕೇಂದ್ರ ಸರ್ಕಾರ ಬಿಡಿಗಾಸು ಬರಪರಿಹಾರ ನೀಡಿಲ್ಲ. ಅತಿ ಹೆಚ್ಚು ಜಿಎಸ್‌ಟಿ ನೀಡುವ ರಾಜ್ಯಗಳಲ್ಲಿ ಕರ್ನಾಟಕವೂ ಒಂದು. ಆದರೆ ನಮ್ಮ ಪಾಲು ಕೇಳಿದರೆ ನೀಡದೆ ಕೇಂದ್ರ ಸರ್ಕಾರ ವಂಚನೆ ಮಾಡುತ್ತಿದೆ ಎಂದು ಬಾಗಲಕೋಟೆ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತ ಪಾಟೀಲ್ ಅವರು ಆರೋಪಿಸಿದರು.

ಬಾಗಲಕೋಟೆ ಲೋಕಸಭಾ ಕ್ಷೇತ್ರದ ಜಮಖಂಡಿ ಮತ್ತು ಸಾವಳಗಿ ಬ್ಲಾಕ್ ಕಾಂಗ್ರೆಸ್ ಸಮಿತಿ ವತಿಯಿಂದ ಜಮಖಂಡಿ ಬಸವ ಭವನದಲ್ಲಿ ಹಮ್ಮಿಕೊಳ್ಳಲಾದ ಕಾರ್ಯಕರ್ತರ ಸಮಾವೇಶದಲ್ಲಿ ಅವರು ಮಾತನಾಡಿದರು.

ಕೇಂದ್ರ ಸರ್ಕಾರ ನಮಗೆ ಭಿಕ್ಷೆ ಕೊಡಬೇಕಿಲ್ಲ. ಬದಲಿಗೆ ಸಂವಿಧಾನಾತ್ಮಕವಾಗಿ ನೀಡಬೇಕಾದ ಪಾಲು ನೀಡಲಿ. ಬರ ಪರಿಹಾರಕ್ಕೆ ಪದೇ ಪದೇ ಮನವಿ ಮಾಡಿದರೂ ಕ್ಯಾರೇ ಎನ್ನದ ಕೇಂದ್ರ ಸರ್ಕಾರ, ನಮ್ಮ ಕಾಂಗ್ರೆಸ್ ಸರ್ಕಾರ ನೀಡುತ್ತಿರುವ ಗ್ಯಾರಂಟಿಗಳ ವಿರುದ್ಧವೇ ಅಪಪ್ರಚಾರ ಮಾಡುತ್ತಿದೆ. ಗ್ಯಾರಂಟಿ ನೀಡಿ ಕರ್ನಾಟಕದ ಕಾಂಗ್ರೆಸ್ ಸರ್ಕಾರ ದಿವಾಳಿಯಾಗಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಹೇಳುತ್ತಾರೆ. ಇಂತಹ ಮನೋಭಾವನೆಯ

ಸರ್ಕಾರವನ್ನು ಕಿತ್ತೊಗೆಯಲು ನಾವೆಲ್ಲ ಕಾಂಗ್ರೆಸ್ ಅನ್ನು ಅಧಿಕಾರಕ್ಕೆ ತರಬೇಕಿದೆ ಎಂದು ಹೇಳಿದರು.

ಕರ್ನಾಟಕದ ರೈತರು, ಜನರು ಕಷ್ಟದಲ್ಲಿದ್ದಾರೆ. ಹಣ ಕೊಡಿ ಎಂದು ಕೇಳಿದರೆ ಒಂದು ಪೈಸೆಯನ್ನೂ ನೀಡದೆ ವಂಚನೆ ಮಾಡಿದೆ. ಇಂಧನ, ಬೇಳೆಕಾಳು, ಅಡುಗೆ ಅನಿಲ ಹೀಗೆ ಅಗತ್ಯ ವಸ್ತುಗಳ ಬೆಲೆ ಗಗನಕ್ಕೇರಿದೆ.

ಕಳೆದ ಹತ್ತು ವರ್ಷಗಳಲ್ಲಿ ಬಿಜೆಪಿ ಸರ್ಕಾರ ಬೆಲೆ ಏರಿಕೆ ತಡೆಯಲು ಏನೂ ಮಾಡಲಿಲ್ಲ. ಬದಲಿಗೆ ಅಂಬಾನಿ, ಆದಾನಿ ಗಳಿಗೆ ಲಾಭ ಮಾಡಿಕೊಡುತ್ತಲೇ ಬಂದಿತು.

ಅವರು ಮಾತ್ರ ಶ್ರೀಮಂತರಾದರು ಹೊರತು ಸಾಮಾನ್ಯ ಜನರ ಬವಣೆ ನೀಗಲಿಲ್ಲ. ಆದ್ದರಿಂದ ಇದಕ್ಕೊಂದು ಪರಿಹಾರ ಸಿಗಲೇ ಬೇಕಿದೆ. ಅದಕ್ಕೆ ಕಾಂಗ್ರೆಸ್ ಅಧಿಕಾರಕ್ಕೆ ಬರಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಚಿವರಾದ ಶಿವಾನಂದ ಪಾಟೀಲ್ , ಆರ್ ಬಿ ತಿಮ್ಮಾಪುರ, ಮಾಜಿ ಸಚಿವರಾದ ಎಸ್ ಆರ್ ಪಾಟೀಲ್, ಶಾಸಕರಾದ ಶ್ರೀ ಜಿ ಟಿ ಪಾಟೀಲ್, ಸುನಿಲ್ ಗೌಡ ಪಾಟೀಲ್ , ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ನಂಜಯ್ಯನಮಠ, ಮಾಜಿ ಸಂಸದರಾದ ಶ್ರೀ ಅಜಯಕುಮಾರ್ ಸರ್ ನಾಯಕ್, ಮುಖಂಡರಾದ ಆನಂದ ನ್ಯಾಮಗೌಡ , ಸಿದ್ದು ಕೊಣ್ಣೂರ ಹಾಗೂ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಇತರರು ಉಪಸ್ಥಿತರಿದ್ದರು.

ಸಂವಿಧಾನ ಬದಲಿಸುವವರನ್ನು ಜನರೇ ಬದಲಾಯಿಸುತ್ತಾರೆ: ದಿಂಗಾಲೇಶ್ವರ ಸ್ವಾಮೀಜಿ

ಹುಬ್ಬಳ್ಳಿ: ಕೆಲವರು ಡಾ. ಬಿ.ಆರ್. ಅಂಬೇಡ್ಕರ್ ಅವರು ರಚಿಸಿರುವ ಸಂವಿಧಾನ ಬದಲಿಸುವ ಹುಚ್ಚು ಸಾಹಸಕ್ಕೆ ಮುಂದಾಗಿ, ಹೇಳಿಕೆ ನೀಡುತ್ತಿದ್ದಾರೆ. ಆದರೆ, ಪ್ರಸ್ತುತ ಲೋಕಸಭಾ ಚುನಾವಣೆಯಲ್ಲಿ ಅವರೇ ಬದಲಾಗಲಿದ್ದಾರೆ ಎಂದು ಶಿರಹಟ್ಟಿಯ ಫಕೀರ ದಿಂಗಾಲೇಶ್ವರ ಸ್ವಾಮೀಜಿ ಹೇಳಿದರು.

ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಅಂಗವಾಗಿ ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಇರುವ ಅಂಬೇಡ್ಕರ್ ಮೂರ್ತಿಗೆ ಭಾನುವಾರ ಮಾಲಾರ್ಪಣೆ ಮಾಡಿ ಅವರು, ಸುದ್ದಿಗಾರರೊಂದಿಗೆ ಮಾತನಾಡಿದರು.

ಡಾ.ಬಿ.ಆರ್. ಅಂಬೇಡ್ಕರ್ ಅವರ ಆದರ್ಶಗಳು ಸೂರ್ಯ-ಚಂದ್ರ ಇರುವವರೆಗೂ ಇರುತ್ತವೆ. ಆದರೆ ಕೆಲವರು ಅವರ ತತ್ವಸಿದ್ಧಾಂತಗಳನ್ನು ತೆಗೆದುಹಾಕುವ, ಸಂವಿಧಾನವನ್ನೇ ಬದಲಿಸುವ ಮಾತುಗಳನ್ನು ಆಡುತ್ತಿದ್ದಾರೆ.

ಇದೇ ವೇದಿಕೆಯಲ್ಲಿ ಕೆಲವರು ಅಂಬೇಡ್ಕರ್ ಅವರನ್ನು ಹೊಗಳಿ ಮಾತನಾಡಿದ್ದಾರೆ. ಅವರ ಮನಸ್ಸಿನಲ್ಲಿ ಇರುವುದೇ ಬೇರೆ, ಬಾಯಲ್ಲಿ ಬರುವ ಮಾತುಗಳೇ ಬೇರೆ.

ಮುಂದಿನ ದಿನಗಳಲ್ಲಿ ಮತದಾರರೇ ಇಲ್ಲಿನ ಅಗ್ರಗಣ್ಯ ನಾಯಕರನ್ನು ಮನೆಗೆ ಕಳುಹಿಸಲಿದ್ದಾರೆ' ಎಂದು ತಿಳಿಸಿದರು.

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ, ಸ್ಪರ್ಧಾಳುವಾಗಿ ಈಗಾಗಲೇ ಮತದಾರರ ಜಾಗೃತಿ ಸಭೆಗಳನ್ನು ಅಲ್ಲಲ್ಲಿ ಆಯೋಜಿಸುತ್ತಿದ್ದೇನೆ. ಇಂದು ಸವಣೂರು, ಶಿಗ್ಗಾವಿಯಲ್ಲಿ ಮತದಾರರ ಸಭೆ ನಡೆಸುತ್ತಿದ್ದೇನೆ ಎಂದರು.

ಅಂಬೇಡ್ಕರ ಆದರ್ಶಗಳು ಸೂರ್ಯ-ಚಂದ್ರ ಇರುವವರೆಗೂ ಅಮರ: ಕಿರಣಸಿಂಗ್ ರಜಪೂತ ಅಭಿಮತ

ಹುಕ್ಕೇರಿ: ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ ಅವರ 133ನೇ ಜಯಂತಿ ಪ್ರಯುಕ್ತ ಹುಕ್ಕೇರಿ ತಾಲೂಕಿನ ಆನಂದಪುರ-ಹತ್ತರಗಿ, ಯಮಕನಮರಡಿ ಸೇರಿದಂತೆ ಮತ್ತಿತರ ಗ್ರಾಮಗಳಲ್ಲಿ ರವಿವಾರ ರಕ್ತದಾನ ಮತ್ತು ಕಣ್ಣು ತಪಾಸಣಾ ಶಿಬಿರ ಏರ್ಪಡಿಸಲಾಗಿತ್ತು.

ವಿಜನ್ ಆಫ್ ಅಂಬೇಡ್ಕರ ಫೌಂಡೇಶನ, ಬೆಳಗಾವಿ ಬ್ಲಡ್ ಬ್ಯಾಂಕ್ ಹಾಗೂ ಎಂ.ಎಂ.ಜೋಶಿ ಐ

ಎಚ್‌ಡಿಕೆ ಹೇಳಿಕೆ ರಾಜ್ಯದ ಮಹಿಳೆಯರಿಗೆ ಮಾಡಿದ ಅಪಮಾನ; ಡಿಸಿಎಂ ಆಕ್ರೋಶ

"ರಾಜ್ಯದ ನನ್ನ ತಾಯಂದಿರು ಹಾಗೂ ಅಕ್ಕ, ತಂಗಿಯರಿಗೆ ಮಾಜಿ ಸಿಎಂ ಕುಮಾರಸ್ವಾಮಿ ಅವರು ಅಪಮಾನ ಮಾಡಿದ್ದು, ಈ ವಿಚಾರವಾಗಿ ಕುಮಾರಸ್ವಾಮಿ ಅವರು ಕ್ಷಮೆ ಕೇಳಬೇಕೆಂದು ನಾನು ಆಗ್ರಹಿಸುವುದಿಲ್ಲ. ಬದಲಿಗೆ ಪ್ರಧಾನಮಂತ್ರಿಗಳು ಹಾಗೂ ಎನ್ಡಿಎ ಮೈತ್ರಿಕೂಟದ ಸಚಿವೆಯರಾದ ನಿರ್ಮಲಾ ಸೀತರಾಮನ್, ಸ್ಮೃತಿ ಇರಾನಿ ಸ್ಪಷ್ಟನೆ ನೀಡಬೇಕು" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಆಗ್ರಹಿಸಿದರು.

ಕೊಡಗಿನಲ್ಲಿ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಅವರ ಪರವಾಗಿ ಭಾನುವಾರ ಪ್ರಚಾರ ನಡೆಸಿದ ಸಂದರ್ಭದಲ್ಲಿ ಶಿವಕುಮಾರ್ ಅವರು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು. ಕುಮಾರಸ್ವಾಮಿ ಅವರ ಹೇಳಿಕೆ ಬಗ್ಗೆ ಮಾಧ್ಯಮಗಳು ಕೇಳಿದಾಗ ಅವರು ಉತ್ತರಿಸಿದ್ದು ಹೀಗೆ:

"ಮಾಜಿ ಮುಖ್ಯಮಂತ್ರಿ, ಜೆಡಿಎಸ್ ಪಕ್ಷದ ಅಧ್ಯಕ್ಷರು, ಮಾಜಿ ಪ್ರಧಾನಮಂತ್ರಿಯ ಮಗ, ಎನ್ಡಿಎ ಮೈತ್ರಿಕೂಟದ ಮಂಡ್ಯ ಅಭ್ಯರ್ಥಿ ಕುಮಾರಸ್ವಾಮಿ ಅವರು, ನಮ್ಮ ಗ್ಯಾರಂಟಿ ಯೋಜನೆಗಳಿಂದ ಹಳ್ಳಿ ಹೆಣ್ಣು ಮಕ್ಕಳು ದಾರಿ ತಪ್ಪುತ್ತಿದ್ದಾರೆ ಎಂದು ಮಹಿಳೆಯರ ಬಗ್ಗೆ ಬಹಳ ಕೀಳಾಗಿ ಮಾತನಾಡಿದ್ದಾರೆ.

ತಾಯಿ ಇಲ್ಲದಿದ್ದರೆ ನಮಗೆ ಬದುಕು ಎಲ್ಲಿದೆ? ಆದ-ರೆ ಈ ಹೇಳಿಕೆ ಮೂಲಕ ಕುಮಾರಸ್ವಾಮಿ ಅವರು ಆ ತಾಯಂದಿರಿಗೆ ಅಪಮಾನ ಮಾಡಿದ್ದಾರೆ. ರಾಜ್ಯದ ಮಹಿಳೆಯರು ಸ್ವಾಭಿಮಾನಿಗಳು. ನನಗೆ ಕರೆ ಮಾಡಿ ದಂಗೆ ಏಳುವ ಬಗ್ಗೆ ಮಾತನಾಡುತ್ತಿದ್ದಾರೆ. ಈ ತಾಯಂದಿರ ಹೋರಾಟಕ್ಕೆ ನಾವು ಅಡ್ಡಿ ಮಾಡುವುದಿಲ್ಲ. ಆದರೆ ನಿಮ್ಮ ಹೋರಾಟ ಕಾನೂನಿನ ಚೌಕಟ್ಟಿನಲ್ಲಿರಲಿ ಎಂದು ಮನವಿ ಮಾಡುತ್ತೇನೆ.

ನಮ್ಮ ಸರ್ಕಾರ ಮಹಿಳೆಯರ ಬದುಕು ಕಟ್ಟಿಕೊಡಲು

ಐದು ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದೆ. ಗೃಹಲಕ್ಷ್ಮಿ ಯೋಜನೆ ಮೂಲಕ 1.20 ಕೋಟಿ ಮಹಿಳೆಯರು ಪ್ರತಿ ತಿಂಗಳು 2 ಸಾವಿರ ಹಣ ಪಡೆಯುತ್ತಿದ್ದಾರೆ. 1.50 ಕೋಟಿ ಕುಟುಂಬಗಳು ಗೃಹಜ್ಯೋತಿ ಯೋಜನೆ ಮೂಲಕ 200 ಯೂನಿಟ್ ವರೆಗೂ ಉಚಿತ ವಿದ್ಯುತ್ ಪಡೆಯುತ್ತಿದ್ದಾರೆ.

ಸುಮಾರು 1.50 ಕೋಟಿ ಕುಟುಂಬಗಳು ಅನ್ನಭಾಗ್ಯ ಯೋಜನೆ ಮೂಲಕ ಉಚಿತ ಅಕ್ಕಿ ಪಡೆಯುತ್ತಿವೆ. ಪ್ರತಿನಿತ್ಯ 60 ಲಕ್ಷ ಮಹಿಳೆಯರು ಸರ್ಕಾರಿ ಬಸ್ ನಲ್ಲಿ ಉಚಿತವಾಗಿ ಪ್ರಯಾಣ ಮಾಡುತ್ತಿದ್ದಾರೆ.

ನಮ್ಮ ಗ್ಯಾರಂಟಿ ಯೋಜನೆಗಳಿಂದ ಪ್ರತಿ ತಿಂಗಳು ಸುಮಾರು 4-5 ಸಾವಿರ ಉಳಿತಾಯವಾಗುತ್ತಿದೆ. ನಮ್ಮ ಗ್ಯಾರಂಟಿ ಯೋಜನೆಗಳ ಪ್ರತಿಫಲವಾಗಿ ನಾವು ಓದಿ ಹೆಚ್ಚಿನ ಅಂಕ ಗಳಿಸಿದ್ದೇವೆ ಎಂದು ಪಿಯುಸಿ ವಿದ್ಯಾರ್ಥಿಗಳು ಹೇಳುತ್ತಿದ್ದಾರೆ.

ನಮ್ಮ ಗ್ಯಾರಂಟಿ ಯೋಜನೆಗಳಿಂದ ಉಳಿತಾಯದ ಹಣದಲ್ಲಿ ಮಹಿಳೆಯರು ರೆಫ್ರಿಜರೇಟರ್, ಟಿವಿ, ಮಕ್ಕಳಿಗೆ ಲ್ಯಾಪ್ ಟಾಪ್, ಔಷಧಿಗಳನ್ನು ಖರೀದಿಸಿದ್ದಾರೆ. ಈ ಹಣದಲ್ಲಿ ಮಹಿಳೆಯರು ತಮ್ಮ ಮಕ್ಕಳ ಭವಿಷ್ಯ ರೂಪಿಸುತ್ತಿದ್ದಾರೆ.

ಇಂತಹ ಮಹಿಳೆಯರನ್ನು ದಾರಿ ತಪ್ಪುತ್ತಿದ್ದಾರೆ ಎಂದು ಹೇಳುವ ಮೂಲಕ ಇಡೀ ಮಹಿಳಾ ಸಮುದಾಯಕ್ಕೆ ಅಪಮಾನ ಮಾಡಿದ್ದಾರೆ.

ಕುಮಾರಸ್ವಾಮಿ ಅವರು ಈ ಹೇಳಿಕೆಗೆ ಕ್ಷಮೆ ಕೇಳಬೇಕು ಎಂದು ನಾನು ಆಗ್ರಹಿಸುವುದಿಲ್ಲ.

ಪ್ರಧಾನಮಂತ್ರಿಗಳು, ಎನ್ಡಿಎ ಮೈತ್ರಿ ಕೂಟದ ಪ್ರಮುಖ ಮಹಿಳಾ ನಾಯಕಿಯರಾದ ನಿರ್ಮಲಾ ಸೀತರಾಮನ್, ಸ್ಮೃತಿ ಇರಾನಿ ಅವರು ಇದಕ್ಕೆ ಉತ್ತರ ನೀಡಬೇಕು. ಇಂತಹವರನ್ನು ನಿಮ್ಮ ಮೈತ್ರಿಕೂಟದಲ್ಲಿ ಹೇಗೆ ಸೇ-ರಿಸಿಕೊಂಡಿದ್ದಾರೆ? ನಮ್ಮ ತಾಯಿ, ತಂಗಿಯರಿಗೆ ಈ ರೀತಿ ಅಪಮಾನ ಮಾಡಿದ್ದು, ಇದನ್ನು ಕ್ಷಮಿಸಲು ಸಾಧ್ಯವಿಲ್ಲ.

ಅಭಿವೃದ್ಧಿಗಾಗಿ ಕಾಂಗ್ರೆಸ್ ಪಕ್ಷವನ್ನೇ ಬೆಂಬಲಿಸಿ: ಪ್ರಿಯಂಕಾ ಜಾರಕಿಹೊಳಿ

ಯಮಕನಮರಡಿ: ಕಳೆದ 15 ವರ್ಷಗಳ ಅವಧಿಯಲ್ಲಿ ಯಮಕನಮರಡಿ ಕ್ಷೇತ್ರದಲ್ಲಿ ನಿರೀಕ್ಷೆಗೂ ಮೀರಿ ಅಭಿವೃದ್ಧಿ ಕಾರ್ಯ ನಡೆದಿದೆ. ಬಸ್ ನಿಲ್ದಾಣ, ಸಮುದಾಯ ಭವನ, ರಸ್ತೆ, ದೇವಾಲಯ, ಮಸೀದಿ, ಚರ್ಚುಗಳ ಅಭಿವೃದ್ಧಿಗೆ ತಂದೆ, ಸಚಿವರಾದ ಸತೀಶ್ ಜಾರಕಿಹೊಳಿ ಅವರು ಆದ್ಯತೆ ನೀಡಿದ್ದಾರೆ. ಇಂತಹ ಅಭಿವೃದ್ಧಿ ಕಾರ್ಯ ನಿರಂತರವಾಗಿ ನಡೆಯಬೇಕು ಎಂದರೆ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕೆಂದು ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರಿಯಾಂಕಾ ಜಾರಕಿಹೊಳಿ

ಅವರು ಹೇಳಿದರು.

ಚಿಕ್ಕೋಡಿ ಲೋಕಸಭೆ ವ್ಯಾಪ್ತಿಯ ಯಮಕನಮರಡಿ ವಿಧಾನಸಭಾ ಕ್ಷೇತ್ರದ ಚಿಕ್ಕಲದಿನ್ನಿ, ಹೊಸಗಡ,ಗೆಜಪತಿ, ಗುಟಗುದ್ದಿ, ಯಲ್ಲಾಪುರ ಹಾಗೂ ರಾಜಕಟ್ಟಿ ಗ್ರಾಮಗಳಲ್ಲಿ ಮತಯಾಚಿಸಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದ ಸಭೆಗಳಲ್ಲಿ ಮಹಿಳೆಯರು ಉತ್ಸಾಹದಿಂದ ಭಾಗವಹಿಸಿದ್ದು ಸಂತೋಷ ತಂದಿದೆ. ಕಾರಣ ದೇಶದ ಹಿತಕ್ಕಾಗಿ ಕಾಂಗ್ರೆಸ್ ಪಕ್ಷ ಮತ್ತೆ ಕೇಂದ್ರದಲ್ಲಿ ಅಧಿಕಾರಕ್ಕೆ ಬರಬೇಕಾಗಿದೆ. ಆದ್ದರಿಂದ ಚಿಕ್ಕೋಡಿ ಲೋಕಸಭೆ ಅಧಿಕೃತ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ನನ್ನನು ಅಧಿಕ ಮತಗಳಿಂದ ಗೆಲ್ಲಿಸಬೇಕಂದು ಮನವಿ ಮಾಡಿದರು.

ಇನ್ನು ಚಿಕ್ಕೋಡಿ ಲೋಕಸಭೆ ವ್ಯಾಪ್ತಿಯಲ್ಲಿ ಬರುವ ಯಮಕನಮರಡಿ ವಿಧಾನಸಭಾ ಕ್ಷೇತ್ರ ನನ್ನ ತವರು ಕ್ಷೇತ್ರವಾಗಿದೆ. ಇಲ್ಲಿನ ಜನರಿಂದ ನಾನು ಬಹಳಷ್ಟು ನಿರೀಕ್ಷೆ ಇಟ್ಟುಕೊಂಡಿದ್ದೇನೆ. ಕಾರಣ ಯಮಕನಮರಡಿ ಕ್ಷೇತ್ರದಿದಂದಲೇ ಹೆಚ್ಚಿನ ಮತಗಳನ್ನು ನನಗೆ ಕೊಡಬೇಕೆಂದು ಮತದಾರರಲ್ಲಿ ವಿನಂತಸಿದರು.

ಈ ಸಂದರ್ಭದಲ್ಲಿ ಯಮಕನಮರಡಿ ವಿಧಾನಸಭಾ ಕ್ಷೇತ್ರದ ಚಿಕ್ಕಲದಿನ್ನಿ, ಹೊಸಗಡ,ಗೆಜಪತಿ, ಗುಟಗುದ್ದಿ, ಯಲ್ಲಾಪುರ ಹಾಗೂ ರಾಜಕಟ್ಟಿ ಗ್ರಾಮಗಳ ಹಿರಿಯರು, ಮುಖಂಡರು, ಯುವಕರು, ಅಪಾರ ಸಂಖ್ಯೆಯ ಮಹಿಳೆಯರು ಇದ್ದರು.

ಸಂವಿಧಾನ ಶಿಲ್ಪಿ ಡಾ.ಬಾಬಾಸಾಹೇಬ ಅಂಬೇಡ್ಕರ್ ಜನ್ಮ ದಿನ ಆಚರಣೆ

ಬೆಳಗಾವಿ: ಸದಾಶಿವನಗರದ ಬಳಿ ಅಂಬೇಡ್ಕರ್ ನಗರದ ಅಂಬೇಡ್ಕರ್ ಭವನದಲ್ಲಿರುವ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಮೂರ್ತಿಗೆ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಮತ್ತು ಬೆಳಗಾವಿ ಲೋಕಸಭಾ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ್ ಅವರು ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು.

ಈ ಸಮಯದಲ್ಲಿ ವಿಜಯರಾಜ ಕುಡಚಿ, ಪಿಂಟು ಗುಂಡಪ್ಪನವರ, ಸತೀಶ್ ಕುರಣೆ, ಗುಂಡು ಗುಂಡಪ್ಪನವರ, ಸಂಜು ಅಳಗೂಡ್ಕರ್, ಎಂ.ಆಯ್.ನಜರೆ ಮುಂತಾದವರು ಉಪಸ್ಥಿತರಿದ್ದರು.

ಯಾದಗೂಡದಲ್ಲಿ ಸಂಭ್ರಮದ ಅಂಬೇಡ್ಕರ್ ಜಯಂತಿ

ಹುಕ್ಕೇರಿ: ತಾಲೂಕಿನ ಯಾದಗೂಡ ಗ್ರಾಮದಲ್ಲಿ ರವಿವಾರ ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್ ಅವರ 133ನೇ ಜಯಂತಿ ಉತ್ಸವ ಆಚ-ರಿಸಲಾಯಿತು.

ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಮನ ಸಲ್ಲಿಸಿದ ಗ್ರಾಪಂ ಅಧ್ಯಕ್ಷೆ ಶ್ರೀದೇವಿ ಲೈನದಾರ ಮಾತನಾಡಿ, ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಸಾಮಾಜಿ-ಕ ಸೌಹಾರ್ದ ಹಾಗೂ ಸಹೋದರತ್ವ ಸಂದೇಶ ಸಾರುವುದೇ ಈ ಕಾರ್ಯಕ್ರಮ ಉದ್ದೇಶ. ಬದಲಾಗಬೇಕಿರುವುದು ಸಂವಿಧಾನವಲ್ಲ, ಬದಲಿಗೆ ನಮ್ಮ ಮನಸ್ಸು. ಜನರಿಗೆ ಇದರ ಬಗ್ಗೆ ಅರಿವು ಮೂಡಿಸುವ ಅಗತ್ಯವಿದೆ ಎಂದರು.

ಭಲವಾದಿ ಮಹಾಸಭೆ ಜಿಲ್ಲಾ ಅಧ್ಯಕ್ಷ ಮಲ್ಲಿಕಾರ್ಜುನ ರಾಶಿಂಗೆ ಮಾತನಾಡಿ, ಯಾರೋ ಕೆಲವರು ಸಮಾಜದಲ್ಲಿ ಮೇಲು-ಕೀಳು ಎಂಬ ವ್ಯವಸ್ಥೆ ಸೃಷ್ಟಿಸಿದ್ದಾರೆ. ಜನಸಾಮಾನ್ಯರು ಸೌಹಾರ್ದತೆಯಿಂದ ಬಾಳ್ವೆ ನಡೆಸುತ್ತಿದ್ದರೂ ರಾಜ-

ಕೀಯ ಶಕ್ತಿಗಳು ಜನರ ನಡುವಿನ ಒಗ್ಗಟ್ಟು ಮು-ರಿಯಲು ಯತ್ನಿಸುತ್ತಿವೆ. ನಾವೆಲ್ಲ ಒಂದಾಗಿದ್ದೇವೆ. ನಮ್ಮೊಳಗೆ ಭೇದ-ಭಾವ ಇಲ್ಲ ಎಂಬುದನ್ನು ಸಮಾಜಕ್ಕೆ ತೋರಿಸಬೇಕಿದೆ ಎಂದರು.

ಈ ಸಂಸರ್ಭದಲ್ಲಿ ಗ್ರಾಪಂ ಸದಸ್ಯೆ ಮೀನಾಕ್ಷಿ ರಾಶಿಂಗೆ, ಮುಖಂಡರಾದ ಸುರೇಶ ಲೈನದಾರ, ಗೌತಮ ರಾಶಿಂಗೆ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಏತ ನೀರಾವರಿ ಪಂಪಹೌಸ್ ಗೆ ಶಾಸಕ ನಿಖಿಲ್ ಕತ್ತಿ ಭೇಟಿ; ಪರಿಶೀಲನೆ

ಹುಕ್ಕೇರಿ: ತಾಲೂಕಿನ ಕೋಚರಿ ಏತ ನೀರಾವರಿ ಯೋಜನೆಯ ಪಂಪ ಹೌಸ್ ಗೆ ಶನಿವಾರ ಶಾಸಕ ನಿಖಿಲ್ ಕತ್ತಿ ಅವರು ಭೇಟಿ ನೀಡಿ ಪರಿಶೀಲಿಸಿದರು.

ನವೀಕರಿಸಿದ ಈ ಪಂಪ್ ಹೌಸಿನ ವಿವಿಧ ಘಟಕಗಳನ್ನು ಪರಿಶೀಲಿಸಿದ ಶಾಸಕ ನಿಖಿಲ್ ಕತ್ತಿ ಅವರು ಯೋಜನೆಯ ಕೊನೆಯ ಹಂತದವರೆಗೂ ನೀರು ತಲುಪಲು ಅಧಿಕಾರಿಗಳು ಮುತುವರ್ಜಿ ವಹಿಸಬೇಕು ಎಂದು ಸೂಚಿಸಿದರು.

ಬೇಸಿಗೆ-ಬರಗಾಲದಲ್ಲಿ ಈ ಸಂದರ್ಭದಲ್ಲಿ ರೈತರ ಹಿತ ಕಾಪಾಡಲು ಯೋಜನೆ

ನವೀಕರಣಗೊಳಿಸಲಾಗಿದೆ. ಈ ವ್ಯಾಪ್ತಿಯ ಗ್ರಾಮಗಳ ರೈತರು ನೀರನ್ನು ಹಿತ-ಮಿತವಾಗಿ ಬಳಸಿಕೊಂಡು ಸದುಪಯೋಗ ಮಾಡಿಕೊಳ್ಳಬೇಕು ಎಂದು ಅವರು ಸಲಹೆ ಮಾಡಿದರು.

ಮಹತ್ವಾಕಾಂಕ್ಷಿ ಈ ಯೋಜನೆಯ ಕೊನೆಯ ಹಂತದವರೆಗೂ ಸರಾಗವಾಗಿ ನೀರು ಸಾಗಲು ಈ ಪಂಪ್‌ಹೌಸ್‌ನಲ್ಲಿ ಹೊಸ ಪಂಪ್ ಮತ್ತು ಮೋಟಾರ್‌ಗಳನ್ನು ಅಳವಡಿಸಲಾಗಿದೆ. ಇದಕ್ಕಾಗಿ 1.70 ಕೋಟಿ ರೂ.ಗಳನ್ನು ವೆಚ್ಚ ಮಾಡುವ ಮೂಲಕ ಯೋಜನೆಯನ್ನು ನವೀಕರಣಗೊಳಿಸಲಾಗಿದೆ. ಕೋಚರಿ ಏತ ನೀರಾವರಿ ಯೋಜನೆ ವ್ಯಾಪ್ತಿಯ ಸುಲ್ತಾನಪೂರ, ಶಿರಗಾಂವ, ಬೇಣಿವಾಡ, ಮದಿಹಳ್ಳಿ, ಮದಮಕ್ಕನಾಳ, ಬಸ್ತವಾಡ, ಹುಕ್ಕೇರಿ, ಮಸರಗುಪ್ಪಿ ಕಾಲುವೆಗಳಿಗೆ ಕಳೆದ ಎರಡು ದಿನದ ಹಿಂದೆ ನೀರು ಹ-ರಿಬಿಡಲಾಗಿದೆ. ಇದರಿಂದ ಈ ಪ್ರದೇಶಗಳ ಜನ ಹಾಗೂ ಜಾನುವಾರುಗಳ ಕುಡಿಯುವ ನೀರಿನ ಬವಣೆ ನೀಗಿಸಿದಂತಾಗಿದೆ. ಗುತ್ತಿಗೆದಾರ ಬಸವರಾಜ ಗಂಗಣ್ಣವರ, ಮುಖಂಡರಾದ ಶ್ರೀಶೈಲ ಮಠಪತಿ, ಶಿವನಗೌಡ ಮದವಾಲ, ಮಹಾದೇವ ಪಾಟೀಲ ಮತ್ತಿತರರು ಉಪಸ್ಥಿತರಿದ್ದರು.

ಇಬ್ಬರು ಮಕ್ಕಳನ್ನು ಕೊಂದಿದ್ದ ತಾಯಿ ಜೈಲಿನಲ್ಲೇ ನೇಣಿಗೆ ಶರಣು

ಬೆಂಗಳೂರು: ತನ್ನ ಇಬ್ಬರು ಮಕ್ಕಳನ್ನು ಕೊಂದು ಪರಪ್ಪನ ಅಗ್ರಹಾರ ಸೇರಿದ್ದ ತಾಯಿ ಗಂಗಾದೇವಿ ಜೈಲಿನಲ್ಲಿ ಆತ್ಮಹತ್ಯೆಗೆ ಶರಣಾಗಿದ್ದಾಳೆ.

ಆರೋಪಿ ಗಂಗಾದೇವಿ ಮಂಗಳವಾರ ರಾತ್ರಿ ಜಾಲಹಳ್ಳಿ ಗ್ರಾಮದಲ್ಲಿ ತನ್ನ ಇಬ್ಬರು ಮಕ್ಕಳನ್ನು ಉಸಿರುಗಟ್ಟಿಸಿ ಸಾಯಿಸಿದ್ದಳು. ಬಳಿಕ ಬುಧವಾರ ಬೆಳಗ್ಗೆ 112ಕ್ಕೆ ಫೋನ್ ಮಾಡಿ ವಿಷಯ ತಿಳಿಸಿ ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ಹೇಳಿದ್ದಳು. ವಿಷಯ ತಿಳಿದ ತಕ್ಷಣ ಜಾಲಹಳ್ಳಿ ಪೊಲೀಸರು ಸ್ಥಳಕ್ಕೆ ತೆರಳಿ ಆಕೆಯನ್ನು ಬಂಧಿಸಿದ್ದರು.



ಗುರುವಾರ ಪರಪ್ಪನ ಅಗ್ರಹಾರಕ್ಕೆ ಗಂಗಾದೇವಿಯನ್ನು ಬಿಡಲಾಗಿ-ತ್ತು. ಅದೇ ದಿನ ರಾತ್ರಿ ಜೈಲಿನಲ್ಲಿನ ಶೌಚಾಲಯದಲ್ಲಿ ತಾನು ಧರಿಸಿದ್ದ ಸೀರೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಆಸ್ಪತ್ರೆಗೆ ಸಾಗಿಸುತ್ತಿದ್ದ ಮಧ್ಯೆ ಗಂಗಾದೇವಿ ಸಾವನ್ನಪ್ಪಿದ್ದಾಳೆ. ರವಿವಾರ ಮರಣೋತ್ತರ ಪರೀಕ್ಷೆ ಮಾಡಿ ಸಂಬಂಧಿಕ-ರಿಗೆ ಮೃತದೇಹ ಹಸ್ತಾಂತರಿಸಲಾಗಿದೆ. ಈ ಕು-ರಿತು ಪರಪ್ಪನ ಅಗ್ರಹಾರ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ವಿಎಸ್ ಕೆ ವಿಶ್ವವಿದ್ಯಾಲಯದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಣೆ

ಬಳ್ಳಾರಿ: ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ.ಬಿ.ಆರ್.ಅಂಬೇಡ್ಕರ್ ಅಧ್ಯಯನ ಹಾಗೂ ಸಂಶೋಧನಾ ಕೇಂದ್ರ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿಶೇಷ ಘಟಕ ಇವರ ಆಶ್ರಯದಲ್ಲಿ ಸಂವಿಧಾನದ ಹರಿಕಾರ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ 133 ನೇ ಜನ್ಮ ದಿನಾಚರಣೆ ಭಾನುವಾರ ಆಚರಿಸಲಾಯಿತು.

ವಿಶ್ವವಿದ್ಯಾಲಯದ ಪ್ರಭಾರ ಕುಲಪತಿಗಳಾದ ಪ್ರೊ.ವಿ-ಜಯ ಕುಮಾರ್ ಮಲಶೆಟ್ಟಿ, ಕುಲಸಚಿವ ಎಸ್.ಎನ್.ರುದ್ರೇಶ್, ಕುಲಸಚಿವರು (ಮೌಲ್ಯಮಾಪನ) ಪ್ರೊ.ರಮೇಶ್ ಓಲೇಕಾರ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು.

ಕಾಂಗ್ರೆಸ್ ಭವನದಲ್ಲಿ ಡಾ. ಬಾಬಾಸಾಹೇಬ ಅಂಬೇಡ್ಕರ್ 131ನೇ ಜನ್ಮದಿನಾಚರಣೆ

ಬೆಳಗಾವಿ: ಇಲ್ಲಿನ ಜಿಲ್ಲಾ ಕಾಂಗ್ರೆಸ್ ಭವನದಲ್ಲಿ ಹಮ್ಮಿಕೊಂಡಿದ್ದ ಡಾ. ಬಾಬಾಸಾಹೇಬ ಅಂಬೇಡ್ಕರ್ 131ನೇ ಜನ್ಮದಿನೋತ್ಸವನ್ನು ಆಚರಿಸಲಾಯಿತು. ಡಾ. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿಲಾಯಿತು.

ಈ ವೇಳೆ ಜಿಲ್ಲಾ ಗ್ರಾಮೀಣ ಕಾಂಗ್ರೆಸ್ ಅಧ್ಯಕ್ಷರಾದ ವಿನಯ ನಾವಲಗಟ್ಟಿ ಮಾತನಾಡಿ, ಸಮ ಸಮಾಜದ ನಿರ್ಮಾಣಕ್ಕೆ ಸಂವಿಧಾನದ ಮೂಲಕ ಭದ್ರ ಬುನಾದಿ ಹಾಕಿದವರು ಮಹಾನ್ ಚೇತನ ಡಾ. ಬಿ.ಆರ್.ಅಂಬೇಡ್ಕರ್ ಅವರು, ತಮ್ಮ ವಿಚಾರಗಳ ಮೂಲಕ ಸಮಾಜದಲ್ಲಿರುವ ಅಂಕು-ಡೊಂಕು ತಿದ್ದಿ, ಎಲ್ಲರೂ ಒಂದೇ ಹಾದಿಯಲ್ಲಿ ಸಾಗಬೇಕು ಎಂದು ಮಾರ್ಗದರ್ಶನ ನೀಡಿದ ಮಹಾನಾಯಕ ಎಂದು ಹೇಳಿದರು.

ಕೆಲವರು ಅಂಬೇಡ್ಕರ್ ಅವರ ಜೀವನ ಸಾಧನೆ ಮೆಚ್ಚಿ ಅದರಂತೆ ನಡೆದು ವೈಚಾರಿಕತೆಗೆ ಬಳಸಿಕೊಂಡರೆ, ಇನ್ನು ಕೆಲವು ತಮ್ಮ ಅನುಕೂಲತೆಗೆ ತಕ್ಕಂತೆ ಬಳಸಿಕೊಳ್ಳುತ್ತಿದ್ದಾರೆ. ಇದು ಆಗಬಾರದು ಮಹಾತ್ಮರ ತತ್ವ, ಮಾರ್ಗದರ್ಶನ ಇಂದಿನ ಮಕ್ಕಳಿಗೆ, ಯುವ ಪೀಳಿಗೆಗೆ ಮುಖ್ಯವಾಗಿದೆ. ಸಮಾನತೆಯಿಂದ ಸರಿಯಾಗಿ ಜೀವನ ನಡೆಸಲು ಸಂವಿಧಾನದಲ್ಲಿ ಕಲ್ಪಿಸಿದ್ದು, ನಮ್ಮ ನಡೆ-ನುಡಿ, ಆಚಾರಗಳು ಬದಲಾಗಬೇಕು ಎಂದರು.

ಈ ವೇಳೆ ಅನಂತಕುಮಾರ್ ಬ್ಯಾಕೋಡ್ ಮಾತನಾಡಿ, ಮನುಕುಲಕ್ಕೆ ಮಹಾ ಕೊಡುಗೆ ನೀಡಿದ ಮಹಾನಾಯಕ ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರು, ಅವರ ಕಂಡ ನನಸಾಗಬೇಕಾದರೆ ಎಲ್ಲ ಸಮುದಾಯದ ಜನರು ಸಮಾನತೆಯಿಂದ ಇರಬೇಕು. ಅವರು ನೀಡಿದ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ನೀಡಿದ ಸಂವಿಧಾನದ ನಮ್ಮಗೆ ಶಕ್ತಿಯಾಗಿ ನಿಂತಿದೆ. ಸಾವಿರಾರೂ ಕೆಳವರ್ಗದ ಜನರು ಸರ್ಕಾರ ಕೆಲಸ ಮಾಡಲು, ದೇಶದಲ್ಲಿ ಬೆಳೆಯಲು ಅನುಕೂಲವಾಗಿದೆ. ಡಾ. ಅಂಬೇಡ್ಕರ್ ಅವರು ಹಾಕಿಕೊಟ್ಟ ಅಡಿಪಾಯದಲ್ಲಿ ಯುವ ಪೀಳಿಗೆ ಸಾಗಬೇಕು ಎಂದು ಹೇಳಿದರು.

ಈ ವೇಳೆ ಮಂಜು ಕಾಂಬಳೆ, ಜಗದೀಶ ಸಾವಂತ, ರೋಹಿಣಿ ಬಾಬ್ ಸೇಠ, ಕಾಂಗ್ರೆಸ್ ಕಾರ್ಯಕರ್ತರು ಇತರರು ಇದ್ದರು.

ಸಂಜಯ ಪಾಟೀಲ್ ಮನೆ ಎದುರು ಮಹಿಳಾ ಕಾಂಗ್ರೆಸ್ ಪ್ರತಿಭಟನೆ

ಬೆಳಗಾವಿ: ಬಿಜೆಪಿ ಸಮಾವೇಶದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಕು-ರಿತು ಅವಹೇಳನಕಾರಿಯಾಗಿ ಮಾತನಾಡಿರುವ ಮಾಜಿ ಶಾಸಕ ಸಂಜಯ ಪಾಟೀಲ ಕೂಡಲೇ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿ ಮಹಿಳಾ ಕಾಂಗ್ರೆಸ್ ಕಾರ್ಯಕರ್ತೆಯರು ಸಂಜಯ ಪಾಟೀಲ ಅವರ ಮನೆ ಎದುರು ಪ್ರತಿಭಟನೆ ನಡೆಸುತ್ತಿದ್

ವಾರ್ತಾ ಭವನದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಆಚರಣೆ

ಬೆಳಗಾವಿ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ರವಿವಾರ(ಏ.14) ವಾರ್ತಾ ಭವನದಲ್ಲಿ ಭಾರತರತ್ನ, ಸಂವಿಧಾನ ಶಿಲ್ಪಿ ಡಾ, ಬಿ. ಆರ್, ಅಂಬೇಡ್ಕರ್ ಅವರ 133ನೇ ಜಯಂತಿಯನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪ ನಿರ್ದೇಶಕರಾದ ಗುರುನಾಥ ಕಡಬೂರ, ಅನಂತ ಪಪ್ಪು, ಪಿಂಚಣಿ, ಸಣ್ಣ ಉಳಿತಾಯ ಇಲಾಖೆಯ ಸಹಾಯಕ ನಿರ್ದೇಶಕರಾದ ವಿಶಾಂತ ಕಂಗ್ರಾಳಕರ, ಬೆಳಗಾವಿಯ ಸಿಟಿಇ ಕಾಲೇಜಿನ ಉಪನ್ಯಾಸಕರಾದ ಶ್ರೀಮತಿ ಝಡ್.ಸಯ್ಯದ್, ಬೆಳಗಾವಿ ಶಾಲಾ ಶೀಕ್ಷಣ ಇಲಾಖೆಯ ವಿಷಯ ಪರಿವೀಕ್ಷಕರಾದ ಶ್ರೀಮತಿ ಎಂ.ಎ. ಪಾಟೀಲ, ಖಾನಾಪೂರ ಆಮಟೆ ಸರ್ಕಾರಿ ಪ್ರೌಢಶಾಲೆಯ ಮುಖ್ಯ ಶಿಕ್ಷಕರು ಎಸ್.ಎಸ್.ಘೋರ್ಪಡೆ, ಸಹ ಶಿಕ್ಷಕ ಅರ್ಜುನ ಕಾಮಣ್ಣವರ, ಬೆಳಗಾವಿಯ ಬಾಚಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕರಾದ ಮಹಾಂತೇಶ ಪತ್ತಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಪ್ರಸ್ತುತ ದಿನಗಳಲ್ಲಿ ಅಂಬೇಡ್ಕರ ವಿಚಾರಧಾರೆ ಅಗತ್ಯ: ದೊಡಮನಿ

ಹುಕ್ಕೇರಿಯಲ್ಲಿ ಅರ್ಥಪೂರ್ಣ ಅಂಬೇಡ್ಕರ ಜಯಂತಿ ಆಚರಣೆ

ಹುಕ್ಕೇರಿ: ಅಸಮಾನತೆ, ಜಾತಿ ವ್ಯವಸ್ಥೆ, ಅಸ್ಪೃಶ್ಯತೆ ವಿರುದ್ಧ ಹೋರಾಡಿದ ಮಹಾಮಾನವತಾವಾದಿ ಡಾ.ಬಿ.ಆರ್. ಅಂಬೇಡ್ಕರ ಅವರ ವಿಚಾರಧಾರೆಗಳು ಪ್ರಸ್ತುತ ದಿನಗಳಲ್ಲಿ ಅಗತ್ಯವಿದೆ ಎಂದು ಹಿರಿಯ ಪತ್ರಕರ್ತ ಡಾ.ಕೆ.ಎನ್. ದೊಡಮನಿ ಅಭಿಪ್ರಾಯಪಟ್ಟರು.

ಪಟ್ಟಣದ ತಾಲೂಕು ಪಂಚಾಯಿತಿ ಆವರಣದಲ್ಲಿ ರವಿವಾರ ಸಮಾಜ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ ವಿವಿಧ ಇಲಾಖೆಗಳ ಆಶ್ರಯದಲ್ಲಿ ನಡೆದ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ ಅವರ 133ನೇ ಜಯಂತಿ ಉತ್ಸವದಲ್ಲಿ ಮಾತನಾಡಿದ ಅವರು, ಮಹಿಳೆಯರನ್ನು ಮುಖ್ಯವಾಗಿಟ್ಟುಕೊಂಡು ಸಮಾಜದ ಎಲ್ಲ ಜನಾಂಗದ ಶ್ರೇಯೋಭಿವೃದ್ಧಿಗೆ ಅಂಬೇಡ್ಕರರು ಶ್ರಮಿಸಿದ್ದಾರೆ ಎಂದರು.

ಶೋಷಿತರು, ದಲಿತರು ಹಾಗೂ ಹಿಂದುಳಿದ ವರ್ಗದವರನ್ನು ತುಳಿಯಲು ಕೆಲವರು ಮುಂದಾಗುತ್ತಿರುವುದು

ನಿಲ್ಲಬೇಕಿದೆ. ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಹಾಗೂ ಆರ್ಥಿಕವಾಗಿ ಎಲ್ಲರಿಗೂ ಸಮಾನ ಅವಕಾಶಗಳು ಸಿಗಬೇಕಿದೆ.

ಈ ನಿಟ್ಟಿನಲ್ಲಿ ಅಂಬೇಡ್ಕರರು ನೀಡಿರುವ ಸಮಗ್ರ ಸಂವಿಧಾನ ಜಾರಿಗೊಳಿಸಬೇಕಿದೆ. ಈ ಮೂಲಕ ಪ್ರಜಾಪ್ರಭುತ್ವ ತಳಹದಿಯ ಅತಿ ದೊಡ್ಡ ನಮ್ಮ ಸಂವಿಧಾನದ ಆಶಯಗಳನ್ನು ಈಡೇರಿಸಬೇಕಿದೆ ಎಂದು ಅವರು ಹೇಳಿದರು.

ಸಾನ್ನಿಧ್ಯ ವಹಿಸಿದ್ದ ಬೆಳವಿ ಶರಣಬಸವ ಸ್ವಾಮೀಜಿ ಮಾತನಾಡಿ, ಎಲ್ಲ ಸಮುದಾಯಗಳನ್ನು ಒಗ್ಗೂಡಿಸಿಕೊಂಡು ಸದೃಢ ಭಾರತ ಕಟ್ಟಬೇಕಿದೆ. ಆದರೆ, ಕೆಲ ಅವಿವೇಕಿಗಳು ಆಗಾಗ ಸಂವಿಧಾನ ಬದಲಾವಣೆ ಮಾಡುತ್ತೇವೆ ಎಂದು ಹೇಳಿಕೆ ನೀಡುತ್ತಿರುವುದು ಅಕ್ಷಮ್ಯ ಅಪರಾಧ. ಇದು ಅಂಬೇಡ್ಕರರಿಗೆ ಮಾಡುತ್ತಿರುವ ಅವಮಾನ. ಅಂಥವರು ಸಂವಿಧಾನ ಎಂದರೇನು? ಅಂಬೇಡ್ಕರ ಎಂದರೇನು ಎನ್ನುವ ಸಾಮಾನ್ಯ ಜ್ಞಾನ ಇಲ್ಲ ಎಂದರು.

ಇದೇ ವೇಳೆ ಪಿಯುಸಿಯಲ್ಲಿ ಅತ್ಯುತ್ತಮ ಸಾಧನೆಗೈದ ಪರಿಶಿಷ್ಟ ಜಾತಿ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಇದಕ್ಕೂ ಮೊದಲು ಅಂಬೇಡ್ಕರ ನಗರದಿಂದ ಆರಂಭವಾದ ಮೆರವಣಿಗೆಗೆ ತಹಸೀಲದಾರ ಬಲರಾಮ ಕಟ್ಟಿಮನಿ ಚಾಲನೆ ನೀಡಿದರು.

ತಾಪಂ ಇಒ ಟಿ.ಆರ್. ಮಲ್ಲಾಡದ, ಗ್ರೇಡ್-2 ತಹಸೀಲ್ದಾರ್ ಪ್ರಕಾಶ ಕಲ್ಲೋಳಿ, ಸಮಾಜ ಕಲ್ಯಾಣ ಅಧಿಕಾರಿ ಎಚ್.ಎ.ಮಾಹುತ, ಸಿಪಿಐಗಳಾದ ಜಯಂತ ಗೌಳಿ, ಎಸ್.ಎಂ.ಅವಜಿ, ಎಂ.ಎನ್.ಶಿರಹಟ್ಟಿ, ಪುರಸಭೆ ಮುಖ್ಯಾಧಿಕಾರಿ ವಿಜಯಮಹಾಂತೇಶ ಹೂಗಾರ, ಶಂಭುಲಿಂಗ ಕಣ್ಣಿ, ಕಂದಾಯ ನಿರೀಕ್ಷಕ ಮಲ್ಲಿಕಾರ್ಜುನ ಸಾರಾಪುರೆ, ಮುಖಂಡರಾದ ಉದಯ ಹುಕ್ಕೇರಿ, ಸುನೀಲ ಬೈರನ್ನವರ, ಮಲ್ಲಿಕಾರ್ಜುನ ರಾಶಿಂಗೆ, ಬಸವರಾಜ ತಳವಾರ, ಬಿ.ಕೆ.ಸದಾಶಿವ, ಕೆಂಪಣ್ಣಾ ಶಿರಹಟ್ಟಿ, ಕೆ.ವೆಂಕಟೇಶ, ಪ್ರಕಾಶ ಮೈಲಾಖೆ, ಕರೆಪ್ಪಾ ಗುಡೆನ್ನವರ, ರವಿ ಸನದಿ, ವಿಠ್ಠಲ ಮಾದರ, ಶಂಕರ ಕಟ್ಟಿಮನಿ, ಪಿಂಟು ಹೊನ್ನೊಳ್ಳಿ, ರೇಖಾ ಬಂಗಾರಿ, ಆರತಿ ಕಾಂಬಳೆ, ನಿಲಯಪಾಲಕರಾದ ಎಲ್.ಬಿ.ಮಾಲದಾರ, ಮಹಾನಂದಾ ಕೊಟಬಾಗಿ, ಎಸ್.ವಿ.ಪೂಜೇರಿ, ಸಂತೋಷ ಮಾಲಗತ್ತಿಮಠ ಮತ್ತಿತರರು ಉಪಸ್ಥಿತರಿದ್ದರು.

ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಎಚ್.ಎ.ಮಾಹುತ ಸ್ವಾಗತಿಸಿದರು. ನಿಲಯ ಪಾಲಕ ಶಿವಾನಂದ ಶೆಟ್ಟೆನ್ನವರ ನಿರೂಪಿಸಿದರು. ಅಂಗನವಾಡಿ ಹಿರಿಯ ಮೇಲ್ವಿಚಾರಕಿ ನಿರ್ಮಲಾ ಕುರಬೇಟ ವಂದಿಸಿದರು.

ಕಲಾವಿದನೆಂದೂ ಪ್ರಸಿದ್ಧಿ ಬೆನ್ನನ್ನು ಹತ್ತಬಾರದು: ದೀಲಿಪಕುಮಾರ ಕಾಳೆ

ಬೆಳಗಾವಿ: ಕಲಾವಿದನೆಂದೂ ಪ್ರಶಸ್ತಿಗಳನ್ನು ಹುಡಿಕೊಂಡು ಹೋಗ ಬಾರದು. ನಮ್ಮ ಕಲೆಯನ್ನು ಹುಡಿಕೊಂಡು ಮನೆಬಾಗಿಲಿಗೆ ಬರಬೇಕು. ಅಂಥ ಅಪರೂಪದ ಕಲೆ ನಮ್ಮದಾಗಬೇಕು. ನುರಿತ ಕಲಾವಿದನಾಗಲು ಆಯುಷ್ಯದ ಅರ್ಧ ಸಮಯವೇ ಬೇಕಾಗಬಹುದು. ಆ ಸಹನೆ ನಮ್ಮಲ್ಲಿರಬೇಕು. ಪ್ರಸಿದ್ಧಿ ಬೆನ್ನನ್ನು ಕಲಾವಿದನೆಂದೂ ಹತ್ತಬಾರದು ಎಂದು ಖ್ಯಾತ ಕಲಾವಿದ ದಿಲೀಪಕುಮಾರ ಕಾಳೆ ಇಂದಿಲ್ಲಿ ಹೇಳಿದರು.

ಬೆಳಗಾವಿಯ ತಿಲವಾಡಿಯ ಎರಡನೇ ರೇಲ್ವೆಗೇಟ್ ಹತ್ತಿರವಿರುವ ಕಲಾಮಹರ್ಷಿ ಕೆ. ಬಿ. ಕುಲಕರ್ಣಿ ಆರ್ಟ ಗ್ಯಾಲರಿ (ವಾರೇಕರ ನಾಟ್ಯ ಸಂಘ) ಸಭಾ ಭವನದಲ್ಲಿ ವರ್ಣಕಲಾ ಸಾಂಸ್ಕೃತಿಕ ಸಂಘ ಮತ್ತು ಶ್ರೀಮಾತಾ ಗ್ಲಾಸ್ ಆರ್ಟ

ಗ್ಯಾಲರಿ ಸಂಘಟನೆಯವರಿಂದ ಇದೇ ದಿ. 14 ರವಿವಾರದಂದು ರಾಷ್ಟ್ರಮಟ್ಟದ ಕಲಾ ಪ್ರದರ್ಶನ ಉದ್ಘಾಟನೆ, ಚಿತ್ರಕಲಾ ಪ್ರದರ್ಶನ ಮತ್ತು ಮಕ್ಕಳ ಚಿತ್ರಗಳ ಆಯ್ಕೆ ಮತ್ತು ಸ್ಪರ್ಧೆ ಜರುಗಿದವು.

ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಆಗಮಿಸಿದ್ದ ಕಲಾವಿದ ದಿಲೀಪಕುಮಾರ ಕಾಳೆಯವರು ಮೇಲಿನಂತೆ ಹೇಳಿದರು. ಮುಂದೆ ಮಾತನಾಡುತ್ತ ಅವರು ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಕಲಾವಿದನದಲ್ಲಿ ಹೊಸತನದ ಅವಶ್ಯಕತೆಯಿದೆಯಾದ್ದರಿಂದ ಚಿತ್ರಕಲೆಯಲ್ಲಿ ಹೊಸತನ ಕಂಡುಕೊಳ್ಳಬೇಕು ಅದಕ್ಕಾಗಿ ಸತತ ಪ್ರಯತ್ನ ಕಲಾವಿದನಲ್ಲಿ ಇರಬೇಕು ಎಂದು ಹೇಳಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಬೆನನ್ ಸ್ಮಿತ್ ಫೈನ್ ಆರ್ಟ ಮಹಾವಿದ್ಯಾಲಯದ ಪ್ರಾಚಾರ್ಯೆ ಶ್ರೀಮತಿ ವೃಂದಾ ಚೆನ್ ಅವರು ಮಾತನಾಡುತ್ತ ಇಂದಿನ ದಿನಗಳಲ್ಲಿ ಕಲಾವಿದನಿಗೆ ಪ್ರೋತ್ಸಾಹದ ಅಗತ್ಯವಿದೆ. ಕಲಾ ಮಹಾವಿದ್ಯಾಲಯಗಳಿಂದು ಮುಚ್ಚುತ್ತಿರುವುದು ಬೇಸರದ ಸಂಗತಿ. ಕಲೆಯ ಮಹತ್ವವನ್ನು ಪಾಲಕರಲ್ಲಿ ಮತ್ತು ವಿದ್ಯಾರ್ಥಿಗಳಿಗೆ ತಿಳಿಹೇಳುತ್ತ ಕಲೆಗೆ ಸಂಬಂಧಿಸಿದ ಮಹಾವಿದ್ಯಾಲಯಗಳನ್ನು ಮುಂದೆವರೆದುಕೊಂಡು ಹೋಗುವಂತೆ ಮಾಡೋಣವೆಂದು ಹೇಳಿದರು

ಸಂಘದ ಅಧ್ಯಕ್ಷರಾದ ನಾಗೇಶ ಚಿಮರೊಲ, ಕಾರ್ಯದರ್ಶಿ ಸಂತೋಷ ಮಲ್ಲೊಳ್ಳಿ, ಬಿರಾದಾರ, ವಿಜಯ ಕಾಮತ ಉಪಸ್ಥಿತರಿದ್ದರು.

ಕಲಾವಿದರಾದ ಗಣೇಶ ದೊಡಮನಿ, ಸಚ್ಚಿನ ಉಪಾಧ್ಯೆ, ಚಂದ್ರಶೇಖರ ಯಡ್ರಾಮಿ, ರಮೇಶ ಸಾಸನೂರ, ರಾಜಕುಮಾರ ಯಲಸ್ಕಂಗಿಕರ, ಅಜಿತ ಹುಲಮನಿ, ಅತಿಫ್ ಪಾಚಾಪುರಿ ಚಿತ್ರಪದರ್ಶನ ನಡೆಯಿತು ಮುಂದೆ ಮಕ್ಕಳ ಚಿತ್ರ ಸ್ಪರ್ಧೆ ಮತ್ತು ಪದರ್ಶನ ನಡೆಯಿತು. ದೇಮಣ್ಣ ಕಟಂಬಳೆ ನಿರೂಪಿಸಿದರು.

15 ಸೋಮವಾರ ದಂದು ವರ್ಣಕಲಾಶ್ರೀ ಪ್ರಶಸ್ತಿ ಪ್ರದಾನ ಸಮಾರಂಭ 2023-24 ನಡೆಯಲಿದ್ದು ಅಂತರರಾಷ್ಟ್ರೀಯ ಕಲಾವಿದರಾದ ಡಾ, ವಿಜಯ ಹಗರಗುಂಡಗಿಯವರು ಸಮಾರಂಭವನ್ನು ಉದ್ಘಾಟಿಸಲಿದ್ದಾರೆ. ನಾಗೇಶ ಚಿಮರೊಲ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ನಿವೃತ್ತ ಉಪನ್ಯಾಸಕರಾದ ಡಾ, ಪಿ. ಜಿ. ಕೆಂಪಣ್ಣವರ ವರ್ಣಕಲಾಶ್ರೀ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಹಿರಿಯ ಚಿತ್ರಕಲಾವಿದರಾದ ಜಗಧೀಶ ಕುಂಟೆ, ಸುಭಾಷ ದೇಸಾಯಿ, ಆರ್. ಎ. ದೇವರ್ಷಿ ಅತಿಥಿಗಳಾಗಿ ಆಗಮಿಸಲಿದ್ದಾರೆ.

ವಿದ್ಯಾರ್ಥಿ ಸ್ಕಾಲರಶಿಪ್ ಪರೀಕ್ಷೆ

ಬೆಳಗಾವಿ: ಕೆ.ಎಲ್.ಇ ಸಂಸ್ಥೆಯ ಪದವಿ ಪೂರ್ವ ಮಹಾ ವಿದ್ಯಾಲಯಗಳಲ್ಲಿ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ ಬರೆದ ವಿದ್ಯಾರ್ಥಿಗಳಿಗಾಗಿ ದಿನಾಂಕ 14/04/2024 ರಂದು ಕೆ.ಎಲ್.ಇ ವಿದ್ಯಾರ್ಥಿ ಸ್ಕಾಲರಶಿಪ್ ಪರೀಕ್ಷೆಯನ್ನು ಹಮ್ಮಿಕೊಳ್ಳಲಾಗಿತ್ತು.

ಈ ಪರೀಕ್ಷೆಗೆ ವಿವಿಧ ಕಡೆಯಿಂದ 2500 ಕ್ಕಿಂತ ಹೆಚ್ಚು ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು.

ವಿದ್ಯಾರ್ಥಿಗಳಿಗೆ ಕಲಿಯುವ ಆಸಕ್ತಿಯನ್ನು ಹೆಚ್ಚಿಸಲು ಈ ಪರೀಕ್ಷೆಯನ್ನು ಹಮ್ಮಿಕೊಳ್ಳಲಾಗಿತ್ತು. ಅದರಜೊತೆಗೆ ಈ ಪರಿಕ್ಷೆಗೆ ಹಾಜರಾದಒಟ್ಟು ವಿದ್ಯಾರ್ಥಿಗಳಲ್ಲಿ ಅತ್ಯುತ್ತಮ ಅಂಕಗಳನ್ನು ಗಳಿಸುವ 25 ವಿದ್ಯಾರ್ಥಿಗಳಿಗೆ ಪಿಯುಸಿ ಪ್ರಥಮ ವರ್ಷಕ್ಕೆ ಉಚಿತ ಪ್ರವೇಶವನ್ನು ನೀಡುವದು.

ಕೆ.ಎಲ್.ಇ ಸಂಸ್ಥೆಯ ಉದ್ದೇಶವಾಗಿತ್ತು. ಕೆ.ಎಲ್.ಇ ಸಂಸ್ಥೆಯ ಆಡಳಿತ ಮಂಡಳಿ ಹಾಗು ಪ್ರಾಚಾರ್ಯರ ಮಾರ್ಗದರ್ಶನದಲ್ಲಿ ಪರೀಕ್ಷೆಯನ್ನು ಯಶಸ್ವಿಗೊಳಿಸಲಾಯಿತು.

ಡಾ.ಬಿ.ಆರ್. ಅಂಬೇಡ್ಕರ್ ಚಿಂತನೆ, ಆದರ್ಶ ಅಳವಡಿಸಿಕೊಳ್ಳಿ: ರಾಹುಲ್ ಜಾರಕಿಹೊಳಿ

ಬೆಳಗಾವಿ: ಸಂವಿಧಾನ ಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ್ ತತ್ವ ಮತ್ತು ಸಂದೇಶಗಳು ಒಂದು ವರ್ಗ, ಸಮುದಾಯಕ್ಕೆ ಸೀಮಿತವಾಗದೆ ಇಡಿ ಮಾನವ ಕುಲಕ್ಕೆ ದಾರಿದೀಪವಾಗಿವೆ ಎಂದು ಸತೀಶ್ ಶುಗರ್ಸ್ ನಿರ್ದೇಶಕ, ಯುವ ನಾಯಕ ರಾಹುಲ್ ಜಾರಕಿಹೊಳಿ ಅವರು ಹೇಳಿದರು.

ಯಮಕನಮರಡಿ ವಿಧಾನಸಭಾ ಕ್ಷೇತ್ರದ ಹತ್ತರಗಿ ಗ್ರಾಮದಲ್ಲಿ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಜಯಂತಿ ನಿಮಿತ್ತ ಅವರ ಭಾವಚಿತ್ರಕ್ಕೆ

ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ವಿಶ್ವದಲ್ಲೇ ಶ್ರೇಷ್ಠ ಸಂವಿಧಾನವನ್ನು ರಚಿಸಿ ಹೊರ ರಾಷ್ಟ್ರಗಳಿಗೆ ನಮ್ಮ ಸಂವಿಧಾನ ಮಾದರಿಯಾಗುವಂತೆ ಮಾಡಿದ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಚಿಂತನೆ, ಆದರ್ಶ ನಡೆ ನಿತ್ಯ ಬದುಕಿನಲ್ಲಿ ಎಲ್ಲರೂ ಆಚರಣೆಗೆ ತರಬೇಕು ಎಂದರು.

ಡಾ.ಬಿ.ಆರ್. ಅಂಬೇಡ್ಕರ್ ತತ್ವಾ ದರ್ಶಗಳನ್ನು ಎಲ್ಲರೂ ಜೀವನದಲ್ಲಿ ಅಳವಡಿಸಿ ಕೊಳ್ಳಬೇಕು. ಅಂಬೇಡ್ಕರ್ ರಚಿಸಿದ ಸಂವಿಧಾನದಿಂದ ಶೋಷಿತರು, ಕಾರ್ಮಿಕರು, ಮಹಿಳೆಯರು, ವಿದ್ಯಾರ್ಥಿಗಳು ಸೇರಿ ಎಲ್ಲರಿಗೂ ಅನುಕೂಲವಾಗಿದೆ. ನಾವೆಲ್ಲ ಉನ್ನತ ಹುದ್ದೆಗಳನ್ನು ಅಲಂಕರಿಸುವಂತಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಮಹಾಂತೇಶ್ ಮಗದುಮ್, ವಿಜಯ ತಳವಾರ್, ಹತ್ತರಗಿ ಗ್ರಾಮದ ಯುವಕರು, ಹಿರಿಯರು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಉಪಸ್ಥಿತರಿದ್ದರು.

ಬೆಳಗಾವಿಯಲ್ಲೂ ಡಾ.ಬಿ.ಆರ್. ಅಂಬೇಡ್ಕರ್ ಪುತ್ಥಳಿಗೆ ಪುಷ್ಪ ನಮನ: ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ 133ನೇ ಜಯಂತಿ ನಿಮಿತ್ತ ಬೆಳಗಾವಿಯ ನಗರದ ಅಂಬೇಡ್ಕರ್ ಉದ್ಯಾನ ವನದಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಗೆ ಸತೀಶ್ ಶುಗರ್ಸ್ ನಿರ್ದೇಶಕ, ಯುವ ನಾಯಕ ರಾಹುಲ್ ಜಾರಕಿಹೊಳಿ ಅವರು ಪುಷ್ಪ ನಮನ ಸಲ್ಲಿಸಿದರು.

ಡಾ. ಬಿ.ಆರ್. ಅಂಬೇಡ್ಕರ ಜಯಂತಿ ಆಚರಣೆ

ಬೆಳಗಾವಿ: ಜ್ಞಾನವೇ ಶಕ್ತಿ ಎಂದು ನಂಬಿದಡಾ. ಬಿ.ಆರ್. ಅಂಬೇಡ್ಕರ ಅವರ ತತ್ವಾದರ್ಶಗಳು ಇಂದಿಗೂ ಪ್ರಸ್ತುತ. ಅವರಜ್ಞಾನ ಹಾಗೂ ಆದರ್ಶಗಳನ್ನು ಇಂದಿನ ಯುವಜನಾಂಗ ಅರಿತು ಕೊಂಡು ಮುನ್ನಡೆಯಬೇಕೆಂದು ಅಂಗಡಿ ತಾಂತ್ರಿಕ ಮತ್ತು ವ್ಯವಸ್ಥಾಪನಾ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಆನಂದ ದೇಶಪಾಂಡೆ ಹೇಳಿದರು.

ನಗರದ ಅಂಗಡಿ ತಾಂತ್ರಿಕ ಮತ್ತು ವ್ಯವಸ್ಥಾಪನಾ ಮಹಾವಿದ್ಯಾಲಯದಲ್ಲಿ ಶುಕ್ರವಾರ, ದಿನಾಂಕ 14.04.2024ರಂದು ಸಂವಿಧಾನಶಿಲ್ಪಿ, ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರರವರ 133ನೇ ಜಯಂತಿಯ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಅಂಬೇಡ್ಕರರವರ ಭಾವಚಿತ್ರಕ್ಕೆ ಪುಷ್ಪಗೌರವಗಳನ್ನು ಸಲ್ಲಿಸಿ ಮಾತನಾಡಿದರು.

ಜೀವನದುದ್ದಕ್ಕೂ ಅನ್ಯಾಯ, ಅಧರ್ಮ, ಅಸ್ಪೃಶ್ಯತೆ, ಶೋಷಣೆ, ಸಾಮಾಜಿಕ ಅನಿಷ್ಟಗಳ ವಿರುದ್ಧ ಹೋರಾಡಿದಡಾ. ಬಿ.ಆರ್. ಅಂಬೇಡ್ಕರ ಅವರ ಸಾಮಾಜಿಕ ಆದರ್ಶಗಳಾದ ಸ್ವಾತಂತ್ರ್ಯ, ಸಮಾನತೆ, ಮಾನವೀಯತೆ ಮತ್ತು ಭ್ರಾತೃತ್ವದ ಭಾವನೆಗಳನ್ನು ನಾವೆಲ್ಲರೂ ನಮ್ಮಜೀವನದ ತತ್ವಗಳನ್ನಾಗಿ ಅಳವಡಿಸಿ ಕೊಂಡು ದೇಶದ ಅಭಿವೃದ್ಧಿಯಲ್ಲಿ ಕೈಜೋಡಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಹೇಳಿದರು.

ಡಾ. ಅಂಬೇಡ್ಕರ್ ಅವರು ರಚಿಸಿದ ಸಂವಿಧಾನ ಭಾರತಕ್ಕಲ್ಲದೆಇಡೀ ವಿಶ್ವಕ್ಕೆ ಪ್ರಜಾಪ್ರಭುತ್ವವನ್ನು ಅರ್ಥೈಸುವ ಸಾಮರ್ಥ್ಯ ಹೊಂದಿದೆ. ಅಂಬೇಡ್ಕರ್ ಅವರು ಸಂವಿಧಾನರಚನೆಗೆ ಪಟ್ಟ ಶ್ರಮ ಹಾಗೂ ಮುತುವರ್ಜಿಯನ್ನು ಸ್ಮರಿಸಬೇಕೆಂದು ಹೇಳಿದರು.

ಪ್ರೊ. ಸಾಗರ ಬಿರ್ಜೆ, ಪ್ರೊ. ಅರವಿಂದಜಾಧವ, ದೈಹಿಕ ನಿರ್ದೇಶಕ ವಿಶಾಂತಥ ಮೋಣೆ, ಪ್ರೊ. ಕಿರಣಯು., ಗಿರೀಶ ಮಡ್ಡಿಮನಿ, ಪ್ರೇಮನಾಥ ಜವಳಿ, ಸೇರಿದಂತೆಎಲ್ಲಾ ವಿಭಾಗಗಳ ಮುಖ್ಯಸ್ಥರು, ಶಿಕ್ಷಕರು, ಸಿಬ್ಬಂದಿವರ್ಗ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಪ್ರೊ. ಸಾಗರರ ಬಿರ್ಜೆ ವಂದಿಸಿದರು.

ಜೈನ ಸಮಾಜದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣಕ್ಕಾಗಿ ಬಡ್ಡಿ ರಹಿತ ಸಾಲ ಸೌಲಭ್ಯ

ಬೆಳಗಾವಿ: ಜೈನ ಇಂಟರ್‌ನ್ಯಾಷನಲ್ ಟ್ರೆಡ್ ಆರ್ಗನೈಝೇಶನ ಜಿತೋ ಸಂಸ್ಥೆಯ ವತಿಯಿಂದ ಜೈನ ಸಮಾಜದ ವಿದ್ಯಾರ್ಥಿಗಳಿಗಾಗಿ ಉನ್ನತ ಶಿಕ್ಷಣಕ್ಕಾಗಿ ಬಡ್ಡಿ ರಹಿತ ಸಾಲ ಸೌಲಭ್ಯ ಜಿತೋ ಶಿಕ್ಷಣ ನೆರವು ಯೋಜನೆಯನ್ನು ಜಾರಿಗೆ ತಂದಿದೆ.

ಈ ಯೋಜನೆಯಡಿ ದ್ವಿತೀಯ ಪಿಯುಸಿ ಉತ್ತೀರ್ಣ ಹೊಂದಿದ ವಿದ್ಯಾರ್ಥಿ- ವಿದ್ಯಾರ್ಥಿನಿಯರು ಈ ಯೋಜನೆಯ ಲಾಭ ಪಡೆದುಕೊಳ್ಳಬಹುದಾಗಿದೆ.ಅದರಂತೆ ಜಿತೋ ಯುಪಿಎಸ್‌ಸಿ ಪರಿಕ್ಷೆಗಾಗಿ ಉಚಿತ ತರಬೇತಿ ನೀಡುವ ।ಯೋಜನೆಯನ್ನು ಸಹ ಜಾರಿಗೆ ತಂದಿದ್ದು ಜೈನ ಸಮಾಜದ ಪದವಿಧರರು ಈ ಯೋಜನೆಯ ಲಾಭ ಪಡೆದುಕೊಳ್ಳಬಹುದಾಗಿದೆ.

ಈ ಎರಡು ಯೋಜನೆಗಳ ಸಮಗ್ರ ಮಾಹಿತಿ ನೀಡಲು ಇದೇ ಏಪ್ರಿಲ 17 ರಂದು ಬೆಳಿಗ್ಗೆ 11 ಗಂಟೆಗೆ ಹಿಂದವಾಡಿಯ ಗೋಗಟೆ ಮಹಾವಿದ್ಯಾಲಯದಲ್ಲಿನ ಕೆ.ಕೆ.ವೇಣುಗೋಪಾಲ ಸಭಾಗೃಹದಲ್ಲಿ ಮಾರ್ಗದರ್ಶನ ನೀಡಲಾಗುವುದು.

ಈ ಕಾರ್ಯಕ್ರಮಕ್ಕೆ ಐಪಿಎಸ್ ಅಧಿಕಾರಿ ಜಿನೇಂದ್ರ ಖನಗಾಂವಿ, ಐಆರ್‌ಎಸ್ ಅಧಿಕಾರಿ ಅಜಯಕುಮಾರ ಜೈನ ಇವರು ಮಾರ್ಗದರ್ಶನ ನೀಡಲಿದ್ದಾರೆ.

ಈ ಕಾರ್ಯಕ್ರಮಕ್ಕೆ ಜಿತೋ ಸಂಸ್ಥೆಯ ಹಿರಿಯ ಪದಾಧಿಕಾರಿಗಳು ಸಹ ಉಪಸ್ಥಿತರಿದ್ದು ಅವರು ಸಹ ಜೈನ ಸಮಾಜದ